EMAIL : dairyadadaari@gmail.com ಸಂಪುಟ: 01 ಸಂಚಿಕೆ: 115
ಬೆಲೆ ರೂ : 2.00
ರಾಯಚೂರು
ಪುಟ: 4
ನಿಮ್ಮ ನಂಬಿಕೆಯ ಧ್ವನಿ
# ಧೈರ್ಯದ ದಾರಿ
DAIRYADA DAARI NEWS PAPER
ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ
Cell : 6360866626, 9036887793
KANNADA DAILY NEWS PAPER
ಕನ್ನಡ ದಿನಪತ್ರಿಕೆ
DAIRYADA DAARI
RNI NO: KNKAN/25/A2795 ಶನಿವಾರ: 11-04-2026

# ರಾಜ್ಯದಲ್ಲಿ ಆಟೋ ಗ್ಯಾಸ್ ಸಮಸ್ಯೆ ಉಲ್ಬಣ : ಅಡುಗೆ ಅನಿಲ ನಿರಾಳ

**ಬೆಂಗಳೂರು, ಏ.10–** ಮಧ್ಯಪ್ರಾಚ್ಯ ದೇಶಗಳಲ್ಲಿನ ಯುದ್ಧ ಸನ್ನಿವೇಶದಿಂದಾಗಿ ಸೃಷ್ಟಿಯಾಗಿದ್ದ ಅಡುಗೆ ಅನಿಲದ ಸಮಸ್ಯೆ ಕ್ರಮೇಣ ಸುಧಾರಣೆಯಾಗುತ್ತಿದೆ. ಆದರೆ, ಆಟೋ ಗ್ಯಾಸ್ ಸಮಸ್ಯೆ ನಿವಾರಣೆಯಾಗಿಲ್ಲ. ಬದಲಾಗಿ ಹೆಚ್ಚಾಗಿದೆ ಎಂದು ಆಹಾರ ಮತ್ತು ನಾಗರಿಕ ಪೂರೈಕೆ ಸಚಿವ ಕೆ.ಎಚ್.ಮುನಿಯಪ್ಪ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು ಕೇಂದ್ರ ಸರ್ಕಾರಿ ಸ್ವಾಮ್ಯದ ತೈಲ ಕಂಪನಿಗಳ ಮುಖ್ಯಸ್ಥರು

ಹಾಗೂ ಸಮನ್ವಯಕಾರರೊಂದಿಗೆ ಮಹತ್ವದ ಸಭೆ ನಡೆಸಿದ ಬಳಿಕ ಅವರು ಸುದ್ದಿಗಾರರೊಂದಿಗೆ ಮಾತನಾಡಿದರು. ರಾಜ್ಯದಲ್ಲಿ 5 ಲಕ್ಷ ಆಟೋಗಳಿವೆ. ಅವುಗಳಲ್ಲಿ 3 ಲಕ್ಷ ಆಟೋಗಳು ಗ್ಯಾಸ್ ಅವಲಂಬಿತವಾಗಿವೆ.

ಬೆಂಗಳೂರಿನಲ್ಲಿ 1.60 ಲಕ್ಷ ಆಟೋಗಳು ಆಟೋ ಗ್ಯಾಸ್ ಬಳಕೆ ಮಾಡುತ್ತಿವೆ. ಸರ್ಕಾರಿ ಸ್ವಾಮ್ಯದ ಗ್ಯಾಸ್ ಬಂಕ್ ಗಳು 60 ಲಕ್ಷ ಮೆಟ್ರಿಕ್ ಟನ್ ಆಟೋ ಗ್ಯಾಸ್ ಪೂರೈಸುತ್ತವೆ. ಉಳಿದಂತೆ ಖಾಸಗಿ ಕಂಪನಿಗಳು 220 ಲಕ್ಷ ಮೆಟ್ರಿಕ್ ಟನ್ ಪೂರೈಸುತ್ತಿದ್ದವು. ಭಾರತ್ ಪೆಟ್ರೋಲಿಯಂ, ಇಂಡಿಯನ್ ಆಯಿಲ್ ಕಂಪನಿ ಸೇರಿದಂತೆ ಸರ್ಕಾರಿ ಸ್ವಾಮ್ಯದ ಗ್ಯಾಸ್ ಬಂಕ್‌ಗಳಲ್ಲಿ ಶೇ.98ರಷ್ಟು



ಪೂರೈಕೆ ಇದೆ. ಆದರೆ ಖಾಸಗಿ ಗ್ಯಾಸ್ ಬಂಕ್‌ಗಳಿಗೆ ಸರಬರಾಜು ಸ್ಥಗಿತಗೊಂಡಿದೆ. ಅವರು ವಿದೇಶದಿಂದ ಆಮದು ಮಾಡಿಕೊಂಡು ಪೂರೈಕೆ ಮಾಡಬೇಕು. ಗ್ಯಾಸ್ ಸಿಗುತ್ತಿಲ್ಲ ಎಂದು ಬಹುತೇಕ ಬಂಕ್ ಗಳು ಮುಚ್ಚಿವೆ. ಟೋಟಲ್ ಗ್ಯಾಸ್ ಮಾತ್ರ ಅಲ್ಪಸ್ವಲ್ಪ ಸರಬರಾಜು ಮಾಡುತ್ತಿದೆ ಎಂದರು.

ಇಂದು ಸಂಜೆ ತಾವು ಖಾಸಗಿ ಬಂಕ್ ಮಾಲೀಕರನ್ನು ಕರೆಸಿ ಚರ್ಚೆ ಮಾಡುತ್ತೇನೆ. ಅವರು ಎಲ್ಲಿಂದ ಗ್ಯಾಸ್ ತರಿಸುತ್ತಾರೆ ಸಮಸ್ಯೆಗಳೇನು ಎಂದು ತಿಳಿದುಕೊಳ್ಳುವ ಪ್ರಯತ್ನ ಮಾಡುತ್ತೇನೆ. ಒಂದು ವೇಳೆ ಖಾಸಗಿಯವರು ಗ್ಯಾಸ್ ಆಮದು ಮಾಡಿಕೊಂಡು ಪೂರೈಕೆ ಮಾಡಲು ಸಾಧ್ಯವಿಲ್ಲ ಎಂದು ಹೇಳಿದರೆ ಕೇಂದ್ರ ಸರ್ಕಾರಕ್ಕೆ ಪತ್ರ ಬರೆಯುತ್ತೇವೆ. ಈ ವ್ಯವಹಾರ ಸಂಪೂರ್ಣವಾಗಿ ಕೇಂದ್ರ ಸರ್ಕಾರಕ್ಕೆ ಸೇರಿದ್ದಾಗಿದೆ. ಖಾಸಗಿ ಗ್ಯಾಸ್ ಬಂಕ್‌ಗಳಿಗೆ ಪರವಾನಗಿ ನೀಡುವುದು, ಅನಿಲ ಪೂರೈಕೆ ಸೇರಿದಂತೆ ಎಲ್ಲವನ್ನೂ ಕೇಂದ್ರವೇ ನಿರ್ವಹಣೆ ಮಾಡುತ್ತದೆ. ರಾಜ್ಯ ಸರ್ಕಾರದ ಪಾತ್ರ ಇದರಲ್ಲಿ ಏನೂ ಇಲ್ಲ. ಸಂಕಷ್ಟ ಕಾಲದಲ್ಲಿ ಜನರ ಸಮಸ್ಯೆಗೆ ಸ್ಪಂದಿಸುವಲ್ಲಿ ಕೇಂದ್ರ ಸರ್ಕಾರ ವಿಫಲವಾಗಿದೆ ಎಂದು ಮುನಿಯಪ್ಪ ಆರೋಪಿಸಿದರು.

ಲಕ್ಷಾಂತರ ಜನ ಚಾಲಕರು ಆಟೋ ಗ್ಯಾಸ್ ನಂಬಿ ಬದುಕುತ್ತಿದ್ದಾರೆ. ಜನ ಸಾಮಾನ್ಯರು ಆಟೋ ಸೇವೆ ಬಳಸುತ್ತಿದ್ದಾರೆ. ಅವರಿಗೆ ಸ್ಪಂದಿಸಬೇಕಿರುವುದು ಕೇಂದ್ರ ಸರ್ಕಾರದ ಜವಾಬ್ದಾರಿ. ತೊಂದರೆಗೆ ಒಳಗಾಗಿರುವವರಿಗೆ ಪರಿಹಾರ ನೀಡುವುದು ಕೂಡ ಕೇಂದ್ರ ಸರ್ಕಾರದ ಹೊಣೆಗಾರಿಕೆ. ಈ ವಿಷಯವಾಗಿ ನಾವು ಈಗಾಗಲೇ ಪೆಟ್ರೋಲಿಯಂ ಸಚಿವಾಲಯಕ್ಕೆ ಪತ್ರ ಬರೆದು ಮನವಿ ಮಾಡಿದ್ದೇವೆ. ಮುಖ್ಯಮಂತ್ರಿಯವರು ಎರಡು ಬಾರಿ ಪತ್ರ ಬರೆದಿದ್ದಾರೆ. ಸರ್ಕಾರದ ಮುಖ್ಯ ಕಾರ್ಯದರ್ಶಿವರು ಒಟ್ಟು ಆರು ಬಾರಿ ಪತ್ರ ಬರೆದಿದ್ದಾರೆ. ನಿನ್ನೆ ಹೊಸದಾಗಿ ಮತ್ತೆ ಮುಖ್ಯಕಾರ್ಯದರ್ಶಿಯವರು ಕೇಂದ್ರಕ್ಕೆ ಪತ್ರ ಬರೆದಿದ್ದಾರೆ ಎಂದು ಮುನಿಯಪ್ಪ 2ನೇಪುಟಕ್ಕೆ

## ಅಮರಾವತಿ ದುರ್ಗಾಭವಾನಿ ಜಿಲ್ಲೆ ಪ್ರಥಮ, ರಾಜ್ಯದಲ್ಲಿ ನಾಲ್ಕನೇ ಸ್ಥಾನ: ತಹಸೀಲ್ದಾರರಿಂದ ಸನ್ಮಾನ



ಧೈರ್ಯದ ದಾರಿ

**ಮಾನ್ವಿ:** ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಕಲಾ ವಿಭಾಗದಲ್ಲಿ ಅಮೋಘ ಸಾಧನೆ ಮಾಡಿದ ದುರ್ಗಾಭವಾನಿ, ರಾಯಚೂರು ಜಿಲ್ಲೆಗೆ ಪ್ರಥಮ ಸ್ಥಾನ ಪಡೆದು ಕೀರ್ತಿ ತಂದಿದ್ದಾಳೆ. ಅಲ್ಲದೆ ಹೈದರಾಬಾದ್ ಕರ್ನಾಟಕ ಪ್ರದೇಶದಲ್ಲಿ ದ್ವಿತೀಯ ರ್‍ಯಾಂಕ್ ಮತ್ತು ರಾಜ್ಯ ಮಟ್ಟದಲ್ಲಿ ನಾಲ್ಕನೇ ಸ್ಥಾನ ಗಳಿಸಿ ಗಮನ ಸೆಳೆದಿದ್ದಾಳೆ.

ಅಮರಾವತಿ ಗ್ರಾಮದ ಬಸವರಾಜ ಅವರ ಪುತ್ರಿಯಾಗಿರುವ ದುರ್ಗಾಭವಾನಿ ಅವರ ಈ ಸಾಧನೆಗೆ ತಾಲೂಕು ಮಟ್ಟದಲ್ಲಿ ಮೆಚ್ಚುಗೆ ವ್ಯಕ್ತವಾಗಿದ್ದು, ಪ್ರತಿಭೆಗೆ ತಹಸೀಲ್ದಾರರು ಸನ್ಮಾನಿಸಿ ಅಭಿನಂದಿಸಿದರು. ವಿದ್ಯಾರ್ಥಿನಿಯ ಶ್ರಮ, ಕುಟುಂಬದ ಬೆಂಬಲ ಹಾಗೂ ಶಿಕ್ಷಕರ ಮಾರ್ಗದರ್ಶನವೇ ಈ ಸಾಧನೆಗೆ ಕಾರಣವೆಂದು ತಿಳಿದುಬಂದಿದೆ.

## ಕಾ.ನಿ.ಪ.ಸಂಘದ ರಾಜ್ಯ ಮಟ್ಟದ ಪ್ರಶಸ್ತಿಗೆ ಆಯ್ಕೆಯಾದ ಪತ್ರಕರ್ತ ಪಿ.ಪರಮೇಶರವರಿಗೆ ತಾಲೂಕು ಘಟಕದಿಂದ ಅಧಿಕೃತ ಆಹ್ವಾನ

ಧೈರ್ಯದ ದಾರಿ



**ಮಾನ್ವಿ:** ಪಟ್ಟಣದ ಪತ್ರಿಕಾ ಭವನದಲ್ಲಿ ಕಾರ್ಯನಿರತ ಪತ್ರಕರ್ತರ ಸಂಘದ ತಾಲೂಕು ಘಟಕದಿಂದ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಮಟ್ಟದ ಪ್ರಶಸ್ತಿಗೆ ಆಯ್ಕೆಯಾದ ಪತ್ರಕರ್ತ ಪಿ.ಪರಮೇಶ ರವರನ್ನು ಅಧಿಕೃತವಾಗಿ ತಾಲೂಕು ಘಟಕದಿಂದ ಬೀದರ್‌ನಲ್ಲಿ ಏ.11 ಮತ್ತು 12 ರಂದು ನಡೆಯುವ ಸಮ್ಮೇಳನದಲ್ಲಿ ರಾಜ್ಯಮಟ್ಟದ ಪ್ರಶಸ್ತಿಯನ್ನು ಸ್ವೀಕರಿಸುವಂತೆ ಕಾ.ನಿ.ಪ.ಸಂಘದ ತಾ.ಅಧ್ಯಕ್ಷರಾದ ಆಶೋಕ ತಡಕಲ್ ಸನ್ಮಾನಿಸಿ ಆಹ್ವಾನಿಸಿ ಮಾತನಾಡಿ ಪ್ರತಿ ವರ್ಷದಂತೆ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಘಟಕದಿಂದ ಬೀದರ್‌ನಲ್ಲಿ ನಡೆಯುಲ್ಲಿದು ಇಂತಹ ಕಾರ್ಯಕ್ರಮದಲ್ಲಿ ಮಾನ್ವಿ ತಾಲೂಕಿನ ಹಿರಿಯ ಸುದ್ದಿಮೂಲ ಪತ್ರಿಕೆಯ ವರದಿಗಾರರಾದ ಪಿ.ಪರಮೇಶರವರಿಗೆ ರಾಜ್ಯ ಘಟಕದಿಂದ ಅರಣ್ಯ ವಿಭಾಗದಲ್ಲಿ ಅತ್ಯುತ್ತಮ ವರದಿಗಾಗಿ ನೀಡುವ ರಾಜ್ಯ ಮಟ್ಟದ ಪ್ರಶಸ್ತಿಗೆ ಆಯ್ಕೆ ಮಾಡಿರುವುದು ಅತ್ಯಂತ ಸಂತೋಷದ ಸಂಗತಿಯಾಗಿದೆ ತಾಲೂಕಿನಿಂದ ಹೆಚ್ಚಿನ ಸಂಖ್ಯೆಯಲ್ಲಿ ಸದಸ್ಯರು ರಾಜ್ಯ ಸಮ್ಮೇಳನದಲ್ಲಿ ಭಾಗವಹಿಸುವಂತೆ ಕೋರಿದರು.

ಜಿಲ್ಲಾ ಘಟಕದ ಬಸವರಾಜ ಭೋಗವತಿ,ಶರಣಬಸವ ನೀರಮಾನ್ವಿ, ತಾಯಪ್ಪ ಬಿ.ಹೋಸುರು. ತಾಲೂಕು ಘಟಕದ ಕಾರ್ಯದರ್ಶಿ ರವಿ ಅಲ್ದಾಳ್, ಸಿದ್ದಾರಾಮಯ್ಯಸ್ವಾಮಿ, ಈಶಪ್ಪ ಬೈಲಮರ್ಚಡ್, ಬಸವ ತಡಕಲ್, ನಾಗರಾಜ, ಗೋವಿಂದ,ಬಸವರಾಜ ಕನ್ನಾರಿ, ಕಿರಣ್ ಕುಮಾರ , ಶಂಕರಪ್ಪ, ಶಿವಕುಮಾರ ಜಗ್ಲಿ, ಗಯಾಸ್, ರಾಮಾಂಜನೇಯ್ಯ,ನವೀನ್ ಕುಮಾರ, ಆನಂದಸ್ವಾಮಿ, ರಾಜಶೇಖರ, ರಾಜಶೇಖರ ಸ್ವಾಮಿ,ಮಹಾಂತೇಶ, ಸೇರಿದಂತೆ ಇನ್ನಿತರರು ಇದ್ದರು.

## ರಾಯಚೂರು: ಲಂಚ ಸ್ವೀಕರಿಸುವಾಗ ಲೋಕಾಯುಕ್ತ ಬಲೆಗೆ ಬಿದ್ದ ಸಿರವಾರ ಮುಖ್ಯಾಧಿಕಾರಿ; ಸಿನಿಮೀಯ ಬೆನ್ನಟ್ಟಿ ಬಂಧನ!

ಧೈರ್ಯದ ದಾರಿ



**ರಾಯಚೂರು, ಏಪ್ರಿಲ್ 10:** ಜಿಲ್ಲೆಯಲ್ಲಿ ಭ್ರಷ್ಟಾಚಾರದ ವಿರುದ್ಧ ಲೋಕಾಯುಕ್ತ ಪೊಲೀಸರು ಭರ್ಜರಿ ಕಾರ್ಯಾಚರಣೆ ನಡೆಸಿದ್ದಾರೆ. ಖಾತಾ ಮ್ಯೂಟೇಶನ್ ಮಾಡಿಕೊಡಲು ಲಂಚಕ್ಕೆ ಬೇಡಿಕೆಯಿಟ್ಟಿದ್ದ ಸಿರವಾರ ಪಟ್ಟಣ ಪಂಚಾಯತ್ ಮುಖ್ಯಾಧಿಕಾರಿ ಸುರೇಶ್ ಶೆಟ್ಟಿ ಅವರನ್ನು ಲೋಕಾಯುಕ್ತ ಅಧಿಕಾರಿಗಳು ಸಿನಿಮೀಯ ರೀತಿಯಲ್ಲಿ ಕಾರ್ಯಾಚರಣೆ ನಡೆಸಿ ವಶಕ್ಕೆ ಪಡೆದಿದ್ದಾರೆ.

ಘಟನೆಯ ಹಿನ್ನೆಲೆ:

ಸಿರವಾರ ಪಟ್ಟಣದ ಹೊಸ ಲೇಔಟ್‌ನ 34 ನಿವೇಶನಗಳ ಖಾತಾ ಮ್ಯೂಟೇಶನ್ ಪ್ರಕ್ರಿಯೆಯನ್ನು ಪೂರ್ಣಗೊಳಿಸಲು ಮುಖ್ಯಾಧಿಕಾರಿ ಸುರೇಶ್ ಶೆಟ್ಟಿ ಅವರು ಲೇಔಟ್ ಮಾಲೀಕ ರಘುರಾಮ್ ರೆಡ್ಡಿ ಅವರಿಂದ 2 ಲಕ್ಷ ರೂ. ಲಂಚಕ್ಕೆ ಬೇಡಿಕೆಯಿಟ್ಟಿದ್ದರು ಎನ್ನಲಾಗಿದೆ. ಈ ಕುರಿತು ರಘುರಾಮ್ ರೆಡ್ಡಿ ಅವರು ನೀಡಿದ ದೂರಿನ ಆಧಾರದ ಮೇಲೆ ಲೋಕಾಯುಕ್ತ ಪೊಲೀಸರು ಬಲೆ ಬೀಸಿದ್ದರು.

**ಸಿನಿಮೀಯ ರೀತಿಯಲ್ಲಿ ಪರಾರಿಯಾಗಲು ಯತ್ನ:** ಗುರುವಾರ ರಘುರಾಮ್ ರೆಡ್ಡಿ ಅವರು 1 ಲಕ್ಷ ರೂ. ಮುಂಗಡ ಹಣವನ್ನು ನೀಡುತ್ತಿದ್ದ ವೇಳೆ ಲೋಕಾಯುಕ್ತರು ದಾಳಿ ನಡೆಸಿದ್ದಾರೆ. ಈ ಸಂದರ್ಭದಲ್ಲಿ ಅಧಿಕಾರಿಗಳಿಂದ ತಪ್ಪಿಸಿಕೊಳ್ಳಲು ಸುರೇಶ್ ಶೆಟ್ಟಿ ತನ್ನ ಕಾರಿನಲ್ಲಿ ವೇಗವಾಗಿ ಪರಾರಿಯಾಗಲು ಯತ್ನಿಸಿದ್ದಾರೆ. ತಕ್ಷಣ ಕಾರ್ಯಪ್ರವೃತ್ತರಾದ ಲೋಕಾಯುಕ್ತ ತಂಡವು ಆರೋಪಿಯ ಮೊಬೈಲ್ ಲೊಕೇಶನ್ ಟ್ರೇಸ್ ಮಾಡುವ ಮೂಲಕ ಅವರ ಚಲನವಲನಗಳನ್ನು ಗಮನಿಸಿದೆ.

**ಸ್ನೇಹಿತನ ಮನೆಯಲ್ಲಿ ಬಂಧನ:** ಪರಾರಿಯಾಗಿದ್ದ ಸುರೇಶ್ ಶೆಟ್ಟಿ ಅವರು ಕವಿತಾಳದಲ್ಲಿರುವ ತಮ್ಮ ಸ್ನೇಹಿತನ ಮನೆಯಲ್ಲಿ ಅಡಗಿರುವ ಬಗ್ಗೆ ಮಾಹಿತಿ ಲಭ್ಯವಾಗಿದೆ. ಇದನ್ನು ಬೆನ್ನಟ್ಟಿದ ಅಧಿಕಾರಿಗಳು ಕವಿತಾಳದ ಮನೆಯ ಮೇಲೆ ದಾಳಿ ನಡೆಸಿ ಅವರನ್ನು ವಶಕ್ಕೆ ಪಡೆಯುವಲ್ಲಿ ಯಶಸ್ವಿಯಾಗಿದ್ದಾರೆ.

## ಜಿಲ್ಲಾಡಳಿತದಿಂದ ಏ.14ರಂದು ಡಾ.ಬಿ.ಆರ್.ಅಂಬೇಡ್ಕರ್ ಜಯಂತಿ

ಧೈರ್ಯದ ದಾರಿ



**ರಾಯಚೂರು:** ಇಲ್ಲಿನ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಸಮಾಜ ಕಲ್ಯಾಣ ಇಲಾಖೆಗಳ ಸಂಯುಕ್ತಾಶ್ರಯದಲ್ಲಿ ಸಂವಿಧಾನ ಶಿಲ್ಪಿ, ಭಾರತ ರತ್ನ ಡಾ.ಬಿ.ಆರ್.ಅಂಬೇಡ್ಕರ್ ಅವರ 135ನೇ ಜಯಂತ್ಯೋತ್ಸವ ಕಾರ್ಯಕ್ರಮವನ್ನು ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಏಪ್ರಿಲ್ 14ರ ಬೆಳಿಗ್ಗೆ 11ಕ್ಕೆ ಹಮ್ಮಿಕೊಳ್ಳಲಾಗಿದೆ.

ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಉದ್ಘಾಟನೆ ನೆರವೇರಿಸುವರು.

ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಅವರು ಘನ ಉಪಸ್ಥಿತಿ ವಹಿಸುವರು.

ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಎಸ್.ಶಿವರಾಜ ಪಾಟೀಲ್ ಅವರು ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರ್ವಿಹಾಳ, ಕರ್ನಾಟಕ ರಾಜ್ಯ ಕೈಗಾರಿಕಾ ಮೂಲಸೌಲಭ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ಸಿಂಧನೂರು ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ, ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷರು ಆಗಿರುವ ಬೀಳಗಿ ಕ್ಷೇತ್ರದ ಶಾಸಕರಾದ ಜೆ.ಟಿ.ಪಾಟೀಲ್, ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ ನಾಯಕ, ಕೊಪ್ಪಳ ಲೋಕಸಭಾ ಸಂಸದರಾದ ಕೆ.ರಾಜಶೇಖರ ಹಿಟ್ನಾಳ, ಮಾನವಿ ಕ್ಷೇತ್ರದ ಶಾಸಕರಾದ ಜಿ.ಹಂಪಯ್ಯ ನಾಯಕ, ಲಿಂಗಸಗೂರು ಕ್ಷೇತ್ರದ ಶಾಸಕರಾದ ಮಾನಪ್ಪ ಡಿ.ವಜ್ಜಲ್, ದೇವದುರ್ಗ ಕ್ಷೇತ್ರದ ಶಾಸಕರಾದ ಕರೆಮ್ಮ ಜಿ.ನಾಯಕ, ವಿಧಾನ ಪರಿಷತ್ ಶಾಸಕರಾದ ಶಶೀಲ್ ಜಿ.ನಮೋಷಿ, ವಿಧಾನ ಪರಿಷತ್ ಶಾಸಕರಾದ ಚಂದ್ರಶೇಖರ್ ಬಿ.ಪಾಟೀಲ್, ವಿಧಾನ ಪರಿಷತ್ ಶಾಸಕರಾದ ಶರಣಗೌಡ ಪಾಟೀಲ ಬಯ್ಯಾಪುರ, ಎ.ವಸಂತಕುಮಾರ, ಬಸನಗೌಡ ಬಾದರ್ಲಿ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಗೌಡ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ರಾಜಶೇಖರ ರಾಮಸ್ವಾಮಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪಾಮಯ್ಯ ಮುರಾರಿ, ರಾಯಚೂರು ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ್, ಆರ್ಥಿಕ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ರಿತೇಶಕುಮಾರ ಸಿಂಗ್, ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಜಹೀರಾ ನಸೀಮ್, ಪ್ರಭಾರಿ ಜಿಲ್ಲಾಧಿಕಾರಿಗಳು ಆಗಿರುವ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಸು ಗಿರಿ., ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಸೇರಿದಂತೆ ಇತರರು ಕಾರ್ಯಕ್ರಮದಲ್ಲಿ ಬಾಗಿಯಾಗಲಿದ್ದಾರೆ. ಕುವೆಂಪು ಕನ್ನಡ ಅಧ್ಯಯನ ಕುಪ್ಪಳ್ಳಿ ಮತ್ತು ಹಿರಿಯ ವಿದ್ವಾಂಸರಾದ ಡಾ.ಬಿ.ಎಂ.ಪುಟ್ಟಯ್ಯ ಅವರು ಸಂವಿಧಾನ ಶಿಲ್ಪಿ, ಭಾರತ ರತ್ನ ಡಾ.ಬಿ.ಆರ್.ಅಂಬೇಡ್ಕರ್ ಅವರ 135ನೇ ಜಯಂತ್ಯೋತ್ಸವ ಕುರಿತು ಉಪನ್ಯಾಸ ನೀಡಲಿದ್ದಾರೆ ಎಂದು ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರಾದ ಪ್ರವೀಣ್ ಕುಮಾರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ದ್ವಿತೀಯ ಪಿಯುಸಿ ಫಲಿತಾಂಶ : ಕಳಿಂಗ ಪಿಯು ಕಾಲೇಜು, ತಾಲೂಕು ಮಟ್ಟದಲ್ಲಿ ಭರ್ಜರಿ ಸಾಧನೆ

ಧೈರ್ಯದ ದಾರಿ

**ಮಾನ್ವಿ:** ಪಟ್ಟಣದ ಪ್ರತಿಷ್ಠಿತ ಕಳಿಂಗ ಪಿಯು ಕಾಲೇಜು ಈ ವರ್ಷದ ದ್ವಿತೀಯ ಪಿಯುಸಿ ಪರೀಕ್ಷಾ ಫಲಿತಾಂಶದಲ್ಲಿ ಭರ್ಜರಿ ಸಾಧನೆ ಮಾಡಿ ತಾಲೂಕು ಮಟ್ಟದಲ್ಲಿ ಗಮನಸೆಳೆದಿದೆ. ವಿದ್ಯಾರ್ಥಿಗಳ ಪರಿಶ್ರಮ, ಶಿಕ್ಷಕರ ಸಮರ್ಪಣೆ ಮತ್ತು ಆಡಳಿತ ಮಂಡಳಿಯ ದೃಢ ನಿಲುವಿನಿಂದ ಕಾಲೇಜು ಮತ್ತೊಮ್ಮೆ ತನ್ನ ಮೇಲುಗೈ ಸಾಧಿಸಿದೆ. ವಾಣಿಜ್ಯ ವಿಭಾಗದಲ್ಲಿ ಗಿರಿಜಾ (ತಂದೆ: ರಾಮಣ್ಣ) ಅವರು 583 ಅಂಕಗಳನ್ನು (97.17%) ಪಡೆದು ತಾಲೂಕಿಗೆ ಪ್ರಥಮ ಸ್ಥಾನ ಪಡೆದು ಕಾಲೇಜಿನ ಕೀರ್ತಿಯನ್ನು ಹೆಚ್ಚಿಸಿದ್ದಾರೆ. ಇವರು ತಮ್ಮ ನಿರಂತರ ಪರಿಶ್ರಮ ಮತ್ತು ಶಿಸ್ತುಬದ್ಧ ಅಭ್ಯಾಸದಿಂದ ಈ ಸಾಧನೆ ಸಾಧ್ಯವಾಗಿದೆ ಎಂದು ಶಿಕ್ಷಕರು ತಿಳಿಸಿದ್ದಾರೆ. ಇನ್ನೊಂದೆಡೆ,ವಿಜ್ಞಾನ ವಿಭಾಗದಲ್ಲಿ ವಿನಯ್ ಶಾಸ್ತ್ರಿ (ತಂದೆ: ವಿಶ್ವನಾಥ ಶಾಸ್ತ್ರಿ) ಅವರು 580 ಅಂಕಗಳನ್ನು (96.66%) ಪಡೆದು ತಾಲೂಕಿಗೆ ದ್ವಿತೀಯ ಸ್ಥಾನ ಗಳಿಸಿದ್ದಾರೆ. ವಿಜ್ಞಾನ ವಿಭಾಗದಲ್ಲಿ ಕಠಿಣ ಸ್ಪರ್ಧೆಯ ನಡುವೆಯೂ ಈ ಸಾಧನೆ ವಿದ್ಯಾರ್ಥಿಯ ಸಾಮರ್ಥ್ಯವನ್ನು ತೋರಿಸುತ್ತದೆ.



600ಕ್ಕೆ 583 (97.17%) ಅಂಕಗಳನ್ನು ಪಡೆದು ವಾಣಿಜ್ಯ ವಿಭಾಗದಲ್ಲಿ ತಾಲೂಕಿಗೆ ಪ್ರಥಮ ಸ್ಥಾನ ಗಳಿಸಿದ ಗಿರಿಜಾ ತಂದೆ ರಾಮಣ್ಣ ವಿಧ್ಯಾರ್ಥಿನಿಗೆ ಕಾಲೇಜಿನ ಆಡಳಿತ ಮಂಡಳಿಯವರು ಶಿಕ್ಷಕರು ಸನ್ಮಾನಿಸಿದರು



600ಕ್ಕೆ 588 (96.66%) ಅಂಕಗಳನ್ನು ಪಡೆದು ವಿಜ್ಞಾನ ವಿಭಾಗದಲ್ಲಿ ತಾಲೂಕಿಗೆ ಪ್ರಥಮ ಸ್ಥಾನ ಗಳಿಸಿದ ವಿನಯ್ ಶಾಸ್ತ್ರಿ ತಂದೆ ವಿಶ್ವನಾಥ ಶಾಸ್ತ್ರಿ ವಿಧ್ಯಾರ್ಥಿಗೆ ಕಾಲೇಜಿನ ಆಡಳಿತ ಮಂಡಳಿಯವರು ಶಿಕ್ಷಕರು ಸನ್ಮಾನಿಸಿದರು

ಇದರ ಜೊತೆಗೆ ವಿಜ್ಞಾನ ವಿಭಾಗದಲ್ಲಿ ಅಂಜಲಿ (ತಂದೆ: ಶಿವಕುಮಾರ್) 576 ಅಂಕಗಳು (96%), ಬಿಬಿ ಅಥೀರ (ತಂದೆ: ಮೊಹಮ್ಮದ್ ಮೆಹಬೂಬ್) 576 ಅಂಕಗಳು (96%), ಹಾಗೂ ಪಿ. ಸೌಮ್ಯ ಪಿ (ತಂದೆ: ಪಿ. ಆದನಗೌಡ) 574 ಅಂಕಗಳು (95.66%) ಪಡೆದು ಸಾಧನೆ ಮಾಡಿದ್ದಾರೆ. ಅದೇ ರೀತಿ ವಾಣಿಜ್ಯ ವಿಭಾಗದಲ್ಲಿ ಅಮರೇಶ (ತಂದೆ: ಲಕ್ಷ್ಮಿಪತಿ) 580 ಅಂಕಗಳು (96.67%), ಸಂಜನಾ ಸಾಲಿ (ತಂದೆ: ಗೋಕಲಪ್ಪ ಶಾಲೆ) 574 ಅಂಕಗಳು (95.67%), ಹಾಗೂ ಶೇಖ ಅಬ್ದುಲ್ ರಹಿಂ (ತಂದೆ: ಶೇಖ ಅಬ್ದುಲ್ ಜಬ್ಬರ್) 572 ಅಂಕಗಳು (95.33%) ಪಡೆದು ಗಮನಾರ್ಹ ಸಾಧನೆ ಮಾಡಿದ್ದಾರೆ. ಕಾಲೇಜಿನ ಒಟ್ಟು ಫಲಿತಾಂಶವೂ ಅತ್ಯುತ್ತಮವಾಗಿದೆ. ಸೈನ್ಸ್ ವಿಭಾಗದಲ್ಲಿ 16 ವಿದ್ಯಾರ್ಥಿಗಳು ಶೇ.90ರ ಮೇಲೆ ಅಂಕ ಗಳಿಸಿದ್ದು, ಕಾಮರ್ಸ್ ವಿಭಾಗದಲ್ಲಿ 14 ವಿದ್ಯಾರ್ಥಿಗಳು ಶೇ.90ರ ಮೇಲೆ ಅಂಕ ಪಡೆದುಕೊಂಡಿದ್ದಾರೆ. ಇದರಿಂದ ಕಾಲೇಜಿನ ಶೈಕ್ಷಣಿಕ ಮಟ್ಟ ಮತ್ತೊಮ್ಮೆ ಸಾಬೀತಾಗಿದೆ. ಈ ಸಾಧನೆ ಹಿನ್ನೆಲೆಯಲ್ಲಿ ಕಾಲೇಜು ಆವರಣದಲ್ಲಿ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಭವ್ಯ ಸನ್ಮಾನ ಕಾರ್ಯಕ್ರಮವನ್ನು ಆಯೋಜಿಸಲಾಯಿತು. ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳನ್ನು ಗೌರವಪೂರ್ವಕವಾಗಿ ಸನ್ಮಾನಿಸಿ, ಅವರ ಸಾಧನೆಯನ್ನು ಕೊಂಡಾಡಲಾಯಿತು. ಶಿಕ್ಷಕರು ಮತ್ತು ಪೋಷಕರು ಈ ಸಂದರ್ಭದಲ್ಲಿ ಹಾಜರಿದ್ದು ವಿದ್ಯಾರ್ಥಿಗಳಿಗೆ ಶುಭಾಶಯಗಳನ್ನು ತಿಳಿಸಿದರು.

ಈ ಸಂದರ್ಭದಲ್ಲಿ ಆಡಳಿತ ಮಂಡಳಿಯವರು ಮಾತನಾಡಿ, “ಕಳಿಂಗ ಪಿಯು ಕಾಲೇಜಿನ ವಿದ್ಯಾರ್ಥಿಗಳು ತಾಲೂಕು ಮಟ್ಟದಲ್ಲಿ ಸಾಧನೆ ಮಾಡಿರುವುದು ನಮಗೆ ಅಪಾರ ಹೆಮ್ಮೆಯ ವಿಷಯ. ಇಂತಹ ಸಾಧನೆಗಳು ಮುಂದಿನ ಪೀಳಿಗೆಗೆ ಪ್ರೇರಣೆಯಾಗಲಿವೆ. ವಿದ್ಯಾರ್ಥಿಗಳ ಪರಿಶ್ರಮ, ಶಿಕ್ಷಕರ ಮಾರ್ಗದರ್ಶನ ಹಾಗೂ ಪೋಷಕರ ಸಹಕಾರದಿಂದಲೇ ಈ ಯಶಸ್ಸು ಸಾಧ್ಯವಾಗಿದೆ. ಮುಂದಿನ ದಿನಗಳಲ್ಲಿ ಇನ್ನಷ್ಟು ಉತ್ತಮ ಫಲಿತಾಂಶಗಳನ್ನು ಸಾಧಿಸಲು ನಾವು ಬದ್ಧರಾಗಿದ್ದೇವೆ” ಎಂದು ತಿಳಿಸಿದರು.

ಮೊದಲನೇ ಪುಟದಿಂದ

# ರಾಜ್ಯದಲ್ಲಿ ಆಟೋ ಗ್ಯಾಸ್ ಸಮಸ್ಯೆ ಉಲ್ಬಣ : ಅಡುಗೆ ಅನಿಲ ನಿರಾಳ

ತಿಳಿಸಿದರು. ಸರ್ಕಾರಿ ಮತ್ತು ಖಾಸಗಿ ಬಂಕ್‌ಗಳು ಆಟೋ ಗ್ಯಾಸ್ ದರವನ್ನು ಸರ್ಕಾರ ನಿಗದಿ ಪಡಿಸಿದ ಮೌಲ್ಯಕ್ಕೆ ಮಾರಾಟ ಮಾಡಬೇಕು. ಹೆಚ್ಚಿನ ದರ ವಸೂಲಿ ಮಾಡಿದರೆ ಎಸಾ ಕಾಯ್ದೆ ಬಳಕೆ ಮಾಡಿ ಕ್ರಮ ಕೈಗೊಳ್ಳುತ್ತೇವೆ. ಬಂಕ್‌ಗಳನ್ನು ಜಪ್ತಿ ಮಾಡುತ್ತೇವೆ ಎಂದು ಎಚ್ಚರಿಸಿದರು.

ಈಗಾಗಲೇ 1491 ದಾಳಿಗಳನ್ನು ನಡೆಸಲಾಗಿದೆ. 29 ಎಫ್ ಐ ಆರ್ ಗಳನ್ನು ದಾಖಲಿಸಿದ್ದೇವೆ. 22 ಮಂದಿಯನ್ನು ಬಂಧಿಸಲಾಗಿದೆ. 1694 ಸಿಲಿಂಡರ್‌ಗಳನ್ನು ಜಪ್ತಿ ಮಾಡಿದ್ದೇವೆ ಎಂದು ವಿವರಿಸಿದರು.

ಕಾಳಸಂತೆಯಲ್ಲಿ ಆಟೋ ಗ್ಯಾಸ್ ಅಥವಾ ಅಡುಗೆ ಅನಿಲ ಸಿಲಿಂಡರ್ ಮಾರಾಟ ಮಾಡಿದರೆ ಕಠಿಣ ಕ್ರಮ ಜರುಗಿಸುತ್ತೇವೆ. ಹೆಚ್ಚಿನ ದರ ವಸೂಲಿ ಮಾಡುತ್ತಿದ್ದರೆ ಅಂತಹ ಗ್ಯಾಸ್ ಬಂಕ್‌ಗಳನ್ನು ಜಪ್ತಿ ಮಾಡುತ್ತೇವೆ. ಆಟೋ ಚಾಲಕರ ಕಷ್ಟಗಳ ಬಗ್ಗೆ ರಾಜ್ಯ ಸರ್ಕಾರಕ್ಕೆ ಕಾಳಜಿ ಇದೆ. ಆದರೆ ಪೂರ್ಣ ಪ್ರಮಾಣದ ವ್ಯವಹಾರ ಇರುವುದು ಕೇಂದ್ರ ಸರ್ಕಾರದ ಕೈನಲ್ಲಿ ಎಂದು ಮುನಿಯಪ್ಪ ತಿಳಿಸಿದರು.

ಗೃಹ ಬಳಕೆಗೆ ನಗರ ಪ್ರದೇಶದಲ್ಲಿ 25 ದಿನಗಳಿಗೆ ಒಂದು, ಗ್ರಾಮೀಣ ಭಾಗದಲ್ಲಿ 45 ದಿನಕ್ಕೆ ಒಂದು ಸಿಲಿಂಡರ್ ವಿತರಿಸುವುದಾಗಿ ಕೇಂದ್ರ ಸರ್ಕಾರ ತಿಳಿಸಿದೆ. ಈ ಮೊದಲು ಅನಿಯಮಿತವಾಗಿ ಸಿಲಿಂಡರ್ ಗಳನ್ನು ಒದಗಿಸಲಾಗುತ್ತಿತ್ತು. ಯುದ್ಧ ಕಾಲದಲ್ಲಿನ ಸಂಕಷ್ಟಕ್ಕಾಗಿ ಕಾಲ ಮಿತಿ ನಿಗದಿ ಮಾಡಿದ್ದಾರೆ. ಒಂದು ಕುಟುಂಬದಲ್ಲಿ ನಾಲ್ಕೈದು ಜನ ಇರುತ್ತಾರೆ ಎಂದರೆ ಅವರಿಗೆ 25 ದಿನಗಳವರೆಗೂ ಸಿಲಿಂಡರ್ ಬಳಕೆಯಾಗಲಿದೆ ಎಂಬುದು ಕೇಂದ್ರ ಸರ್ಕಾರದ ಲೆಕ್ಕಾಚಾರ. 26ನೇ ದಿನಕ್ಕೆ ಹೊಸ ಸಿಲಿಂಡರ್‌ಗೆ ಬುಕ್ ಮಾಡಿದರೆ ಅದೇ ದಿನ ಸರಬರಾಜಾಗಬೇಕು. ಮೊದಲಿನಿಂದ ವಾರಗಟ್ಟಲೆ ಕಾಯಿಸಬಾರದು ಎಂದು ಸಚಿವರು ಎಚ್ಚರಿಕೆ ನೀಡಿದರು.

ನಗರ ಪ್ರದೇಶದಲ್ಲಿ 26ನೇ, ಗ್ರಾಮೀಣ ಭಾಗದಲ್ಲಿ 46ನೇ ದಿನಕ್ಕೆ ತಪ್ಪದೆ ಸಿಲಿಂಡರ್ ಪೂರೈಸುವಂತೆ ತೈಲ ಕಂಪೆನಿಗಳಿಗೆ ನಿರ್ದೇಶನ ನೀಡಲಾಗಿದೆ. ಇಲ್ಲವಾದರೆ ಜನ ಮತ್ತೆ ಆತಂಕಕ್ಕೆ ಒಳಗಾಗುತ್ತಾರೆ. ಡಿಸ್ಟ್ರಿಬ್ಯೂಟರ್‌ಗಳ ಕಚೇರಿ ಮುಂದೆ ಸಾಲುಗಟ್ಟಿ ನಿಲ್ಲುತ್ತಾರೆ. ಈ ರೀತಿಯಾಗದಂತೆ ಮುನ್ನೆಚ್ಚರಿಕೆ ವಹಿಸುವಂತೆ ಸೂಚನೆ ನೀಡಿರುವುದಾಗಿ ಸಚಿವರು ತಿಳಿಸಿದರು.

ವಾಣಿಜ್ಯ ಬಳಕೆಗೆ 10 ಸಾವಿರ ಸಿಲಿಂಡರ್‌ಗಳು ಬೇಕು. ಸದ್ಯದಲ್ಲಿ ಸರಾಸರಿ 3 ರಿಂದ 4 ಸಾವಿರ ಸಿಲಿಂಡರ್‌ಗಳನ್ನು ಪೂರೈಸಲಾಗುತ್ತಿದೆ. ಇನ್ನೊಂದಿಷ್ಟು ಸುಧಾರಣೆಯಾಗಿ ಆರು ಸಾವಿರ ಸಿಲಿಂಡರ್‌ವರೆಗೂ ಪೂರೈಸಿದರೆ ಸಮಸ್ಯೆ ಮತ್ತಷ್ಟು ಸ್ವಲ್ಪ ಕಡಿಮೆಯಾಗಬಹುದು. ಶಾಲಾ–ಕಾಲೇಜುಗಳು, ಆಸ್ಪತ್ರೆಗಳಿಗೆ ಪೂರ್ಣ ಪ್ರಮಾಣದಲ್ಲಿ ಸಿಲಿಂಡರ್‌ಗಳು ಸರಬರಾಜಾಗುತ್ತಿವೆ. ಹೋಟೆಲ್‌ಗಳಿಗೆ ಶೇ.62ರಷ್ಟು ಸಿಲಿಂಡರ್ ಪೂರೈಕೆಯಾಗುತ್ತಿದೆ ಎಂದು ವಿವರಿಸಿದರು.

## ಏಪ್ರಿಲ್ 14ರಂದು ಡಾ.ಬಿ.ಆರ್.ಅಂಬೇಡ್ಕರ್ ಜಯಂತಿ: ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಭಾಗವಹಿಸುವಂತೆ ಮನವಿ

**ರಾಯಚೂರು:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಸಮಾಜ ಕಲ್ಯಾಣ ಇಲಾಖೆಯಿಂದ ಏಪ್ರಿಲ್ 14ರಂದು ಭಾರತರತ್ನ, ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರ 135ನೇ ಜನ್ಮ ದಿನಾಚರಣೆ ಯನ್ನು ಆಚರಿಸಲಾಗುತ್ತಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಮುಖಂಡರು, ಸಾರ್ವಜನಿಕರು ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಕೋರಲಾಗಿದೆ.

ಅಂದು ಬೆಳಿಗ್ಗೆ 9:30 ಗಂಟೆಗೆ ಡಾ.ಬಿ.ಆರ್.ಅಂಬೇಡ್ಕರ್ ವೃತ್ತದಲ್ಲಿರುವ ಡಾ.ಬಿ.ಆರ್.ಅಂಬೇಡ್ಕರ್ ಅವರ ಪುತ್ಥಳಿಗೆ ಪೂಜೆ ಹಾಗೂ ಮಾಲಾರ್ಪಣೆ ಕಾರ್ಯಕ್ರಮ ನಡೆಯಲಿದೆ. ನಂತರ ರಂಗಮಂದಿರದವರೆಗೆ ಮೆರವಣಿಗೆ ಮಾಡಲಾಗುವುದು. ಬೆಳಿಗ್ಗೆ 11ಗಂಟೆಗೆ ಶ್ರೀ ಪಂಡಿತ್ ಸಿದ್ದರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ವೇದಿಕೆ ಕಾರ್ಯಕ್ರಮ ಮತ್ತು ಕುವೆಂಪು ಕನ್ನಡ ಅಧ್ಯಯನದ ನಿರ್ದೇಶಕರಾದ ಡಾ.ಬಿ.ಎಂ.ಪುಟ್ಟಯ್ಯ ಅವರಿಂದ ಉಪನ್ಯಾಸ ಕಾರ್ಯಕ್ರಮವಿದ್ದು, ಎಲ್ಲಾ ಅಧಿಕಾರಿ ಹಾಗೂ ಸಿಬ್ಬಂದಿ ವರ್ಗದವರು, ಸಮಾಜದ ಎಲ್ಲಾ ಮುಖಂಡರು, ವಿವಿಧ ಸಂಘ–ಸಂಸ್ಥೆಯ ಪದಾಧಿಕಾರಿಗಳು ಹಾಗೂ ಸಾರ್ವಜನಿಕರು ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜೆಸ್ಕಾಂ ನಿಂದ ಏಪ್ರಿಲ್ 12ರಂದು ವಿದ್ಯುತ್ ವ್ಯತ್ಯಯ

**ರಾಯಚೂರು:** ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪ ವಿಭಾಗದ ವ್ಯಾಪ್ತಿಗೆ ಬರುವ 110/11 ಕೆವಿ ವಡವಟ್ಟಿ ವಿದ್ಯುತ್ ಉಪ–ಕೇಂದ್ರದ ಸಿಂಗನೋಡಿ, ಬಾಪೂರು, ಮಂಡ್ಲಗೇರಾ, ಬಾಯಿದೊಡ್ಡಿ, ಸಿಂಗನೋಡಿ ತಾಂಡ ತುರ್ತು ನಿರ್ವಹಣಾ ಕಾರ್ಯ ಹಮ್ಮಿಕೊಂಡಿರುವ ಪ್ರಯುಕ್ತ ಏಪ್ರಿಲ್ 12ರ ಬೆಳಿಗ್ಗೆ 10ರಿಂದ ಸಂಜೆ 5 ಗಂಟೆವರೆಗೆ ವಿದ್ಯುತ್ ಗ್ರಾಹಕರಿಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು, ಗ್ರಾಹಕರು ಸಹಕರಿಸುವಂತೆ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಾನವೀಯತೆ, ಸಹಾನುಭೂತಿ ಸಾರಿದ ಈದ್ ಮಿಲಾದ್




**ಕಲಬುರಗಿ, ಏ.10:** ಈದ್ ಹಬ್ಬವು ಕೇವಲ ಒಂದು ಧರ್ಮಕ್ಕೆ ಸೀಮಿತವಲ್ಲದೆ, ಮಾನವೀಯತೆ, ಸಹಾನುಭೂತಿ, ಕ್ಷಮೆ ಮತ್ತು ಸಹಬಾಳ್ವೆ ಎಂಬ ಸಾರ್ವತ್ರಿಕ ಮೌಲ್ಯಗಳನ್ನು ಸಾರುತ್ತದೆ ಎಂದು ಮಂಗಳೂರಿನ ಚಾರ್ಟರ್ಡ್ ಅಕೌಂಟೆಂಟ್ ಆದ ಇಶಾಕ್ ಪುತ್ತೂರು ಹೇಳಿದರು.

ಕೆ.ಪಿ.ಟಿ.ಸಿ.ಎಲ್ ಮುಸ್ಲಿಂ ಉದ್ಯೋಗಿಗಳ ಕಲ್ಯಾಣ ಸಂಘದ ವತಿಯಿಂದ ಈದ್ ಮಿಲಾದ್ ಕಾರ್ಯಕ್ರಮವನ್ನು ಕೆಇಬಿ ಎಂಜಿನಿಯರ್ ಅಸೋಸಿಯೇಷನ್ ಹಾಲ್, ಜೆಸ್ಕಾಂ ನಿಗಮ ಕಚೇರಿ ಆವರಣದಲ್ಲಿ ಆಚರಿಸಲಾಯಿತು. ಈ ಸಂದರ್ಭದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿ ಮಾತನಾಡಿದ ಅವರು, ಹಂಚಿಕೊಳ್ಳುವ ಸಂತೋಷವೇ ನಿಜವಾದ ಸಂತೋಷ" ಎಂಬ ಸಂದೇಶವನ್ನು ಈ ಹಬ್ಬ ನೀಡುತ್ತದೆ. ಧರ್ಮವನ್ನು ಪ್ರೀತಿಸುವವರು ಮನುಷ್ಯರನ್ನು ಪ್ರೀತಿಸುತ್ತಾರೆ ಎಂದು ಖುರಾನ್ ಹಾಗೂ ಈದ್ ಹಬ್ಬದ ಮಹತ್ವವನ್ನು ವಿವರಿಸಿದರು.

ಇದೇ ವೇಳೆ ಮಾತನಾಡಿದ ಜೆಸ್ಕಾಂನ ಅಧ್ಯಕ್ಷ ಪ್ರವೀಣ್ ಪಾಟೀಲ್ ಹರವಾಳ ಅವರು, ಯಾವ ಊರಿನಲ್ಲಿ ಜಾತಿ–ಜಾತಿ ಎಂದು ಜಗಳವಿಲ್ಲವೋ ಆ ಊರು ಸಂತೋಷದಿಂದ ಕೂಡಿರುತ್ತದೆ. ಮಾನವೀಯತೆಯೇ ಮೊದಲು ಎಂದು ಎಲ್ಲಾ ಧರ್ಮಗಳೂ ಸಾರುತ್ತವೆ ಎಂದು ಹೇಳಿದರು.

ಕಾರ್ಯಕ್ರಮದ ಮತ್ತೊರ್ವ ಮುಖ್ಯ ಅತಿಥಿಯಾಗಿ ಭಾಗವಹಿಸಿದ ಜೆಸ್ಕಾಂನ ಮಹಿಳಾ ದೂರು ನಿವಾರಣಾ ಕೋಶದ ಅಧ್ಯಕ್ಷ ಎ.ಹೆಚ್. ಮುಮ್ತಾಜ್ ಅವರು ಮಾತನಾಡಿದರು ಈ ಕಾರ್ಯಕ್ರಮದಲ್ಲಿ ಜೆಸ್ಕಾಂನ ವ್ಯವಸ್ಥಾಪಕ ನಿರ್ದೇಶಕ ಕೃಷ್ಣ ಬಾಜಪಾಯಿ,ಚಂದ್ರಕಾಂತ್ ಪಾಟೀಲ್, ರಾಮಸ್ವಾಮಿ ಎಂ.ಎಲ್, ಶಿವಶಂಕರ್ ಬಿ.ಎಚ್, ಮಹಾಲಕ್ಷ್ಮಿ ಟಿ.ಡಿ., ಬಾಬು ಕೋರೆ, ಶಿವಾನಂದ ತೋಳೆ, ಸಚಿನ್ ಹುಂಡೇಕರ್, ಸಂತೋಷ ವಡ್ಕಿ, ಆತಿಫ್ ಪಾಶಾ, ಸಲೀಂ ಪಾಟೀಲ್ ಸೇರಿದಂತೆ ಕೆಪಿಟಿಸಿಎಲ್ ಮತ್ತು ಜೆಸ್ಕಾಂನ ಎಲ್ಲ ಅಧಿಕಾರಿಗಳು ಭಾಗವಹಿಸಿದ್ದರು.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
6360866626

## ಸಿರವಾರ ತಾಲೂಕು ಪಂಚಾಯತ್: ಸಹಾಯವಾಣಿ ಆರಂಭ

**ರಾಯಚೂರು:** ಪ್ರಸ್ತುತ ಬೇಸಿಗೆ ಕಾಲ ಇರುವ ಪ್ರಯುಕ್ತ ಜಿಲ್ಲೆಯ ಸಿರವಾರ ತಾಲೂಕಿನ ವ್ಯಾಪ್ತಿಯಲ್ಲಿ ಬರುವ ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆಗಳ ಬಗ್ಗೆ ತಾಲೂಕು ಪಂಚಾಯತ್ ಕಾರ್ಯಾಲಯದಲ್ಲಿ ಸಹಾಯವಾಣಿ ಪ್ರಾರಂಭಿಸಲಾಗಿದ್ದು, ಸಾರ್ವಜನಿಕರು ಈ ಸೌಲಭ್ಯವನ್ನು ಬಳಕೆ ಮಾಡಿಕೊಳ್ಳಬಹುದಾಗಿದೆ ಎಂದು ಕೋರಲಾಗಿದೆ.

ತಾಲೂಕು ಪಂಚಾಯತ್ ಕಚೇರಿಯ ಬೆಳಿಗ್ಗೆ 9ರಿಂದ ಮಧ್ಯಾಹ್ನ 11ರವರಗೆ ಗ್ರೇಡ್–1 ಕಾರ್ಯದರ್ಶಿ ಮಲ್ಲಿಕಾರ್ಜುನ ದೂರವಾಣಿ ಸಂಖ್ಯೆ: 7022278013, ಮಧ್ಯಾಹ್ನ 11ರಿಂದ ಸಂಜೆ 4ರವರೆಗೆ ಡಿ ಗ್ರೂಪ್ ನೌಕರ ಶಂಕ್ರಪ್ಪ ದೂರವಾಣಿ ಸಂಖ್ಯೆ: 9632544321, ಸಂಜೆ 4ರಿಂದ ರಾತ್ರಿ 10ರವರಗೆ ಎನ್.ಆರ್.ಎಲ್.ಎಂ ಶ್ರೀಧರ್ ದೇಶಪಾಂಡೆ ದೂರವಾಣಿ ಸಂಖ್ಯೆ: 9535420463ಗೆ ಸಂಪರ್ಕ ಮಾಡಬಹುದಾಗಿದೆ ಎಂದು ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶ್ರೀ ಅಡವಿ ಅಮರೇಶ್ವರ ದೇವಸ್ಥಾನದ 72 ನೇ ಜಾತ್ರ ಮಹೋತ್ಸವ ಅಂಗವಾಗಿ ಸಂಗ್ರಾಣಿ ಕಲ್ಲು ಎತ್ತುವ ಸ್ಪರ್ಧೆ



ಧೈರ್ಯದ ದಾರಿ

**ಮಾನ್ವಿ:** ತಾಲೂಕಿನ ಅಡವಿ ಅಮರೇಶ್ವರ ಗ್ರಾಮದಲ್ಲಿನ ಸುವರ್ಣಗಿರಿ ಮಠದ ಶ್ರೀ ಅಡವಿ ಅಮರೇಶ್ವರ ದೇವಸ್ಥಾನದ 72 ನೇ ಜಾತ್ರ ಮಹೋತ್ಸವ ಅಂಗವಾಗಿ ನಡೆದ ವಿವಿಧ ಜನಪದ ಗ್ರಾಮೀಣ ಕ್ರೀಡೆಗಳಿಗೆ ಶ್ರೀ ಮಠದ ಶ್ರೀತೋಂಟಾದಾರ್ಯ ಮಹಾಸ್ವಾಮಿಗಳು ಚಾಲನೆ ನೀಡಿ ಮಾತನಾಡಿ ಗ್ರಾಮೀಣ ಭಾಗದಲ್ಲಿ ಇನ್ನೂ ಕೂಡ ಜನಪದ ಕ್ರೀಡೆಗಳು ಜೀವಂತವಾಗಿದ್ದು ಅವುಗಳನ್ನು ಉಳಿಸಿ ಬೆಳೆಸುವ ಮೂಲಕ ಯುವ ಸಮುದಾಯದಲ್ಲಿ ಸಾಹಸ ಪ್ರವೃತ್ತಿಯನ್ನು ಬೆಳೆಸುವ ಉದ್ದೇಶದಿಂದ ಸಂಗ್ರಾಣಿ ಕಲ್ಲು ಎತ್ತುವ ಸ್ಪರ್ಧೆಯನ್ನು ಅಯೋಜಿಸಲಾಗಿದೆ ಎಂದು ತಿಳಿಸಿದರು.

ಸಂಗ್ರಾಣಿ ಕಲ್ಲು ಎತ್ತುವ ಸ್ಪರ್ಧೆಯಲ್ಲಿ ಪ್ರಥಮ ಬಹುಮಾನವನ್ನು 15 ಸಾವಿರ ಕೊದ್ದಡ್ಡಿಯ ಪ್ರಕಾಶ ರವರಿಗೆ ,ದ್ವಿತೀಯ ಬಹುಮಾನ 10ಸಾವಿರ ವೆಂಕಟೇಶ ಇಬ್ರಾಹಿಂದೊಡ್ಡಿ,ತೃತೀಯ ಬಹುಮಾನ 6ಸಾವಿರ ರಮೇಶ ಹುಲಿಗುಡ್ಡ, ಚತುರ್ಥ ಬಹುಮಾನ 4ಸಾವಿರ ರವಿ ಉದ್ವಾಳ್ ರವರಿಗೆ ನೀಡಿ ಗೌರವಿಸಲಾಯಿತು.

ಸಂಗ್ರಾಣಿ ಕಲ್ಲು ಎತ್ತುವ ಸ್ಪರ್ಧೆಯಲ್ಲಿ ವಿವಿಧ ತಾಲೂಕುಗಳ ಸ್ಪರ್ಧಿಗಳು ಉತ್ಸಾಹದಿಂದ ಭಾಗವಹಿಸಿದರು.

ಸಂಗ್ರಾಣಿ ಕಲ್ಲು ಎತ್ತುವ ಸ್ಪರ್ಧೆಯ ನಿರ್ವಹಣೆಯನ್ನು ರಮೇಶನಾಯಕ ಹುಣೇಸೆಮರ, ರಘುಸಿಂಗ್ ರಜಪೂತ್ ಹಿರೇಕೊಟ್ನೆಕಲ್ ನಿರ್ವಹಿಸಿದರು. ಬಹುಮಾನಗಳ ಪ್ರಯೋಜಕತ್ವವನ್ನು ಶಿವುಕುಮಾರಸ್ವಾಮಿ, ರಾಜಶೇಖರ ಬಜಾರ್, ಹನುಮಂತನಾಯಕ ಹುಣಸೆಮರ,ಟಿ.ರಾಮಲಿಂಗಯ್ಯನಾಯಕ ವಹಿಸಿದರು.

ಸುತ್ತಮುತ್ತಲಿನ ಗ್ರಾಮಗಳ ಸಾವಿರಾರು ಗ್ರಾಮಸ್ಥರು ಉತ್ಸಾಹದಿಂದ ಕ್ರೀಡೆಯನ್ನು ವಿಕ್ಷೀಸಿದರು.

## ಕಾಂಗ್ರೇಸ್ ಪಕ್ಷದ ರಾಷ್ಟ್ರೀಯ ಅಧ್ಯಕ್ಷರಾದ ಮಲ್ಲಿಕಾರ್ಜುನ ಖರ್ಗೆಯವರ ಮೇಲೆ ಕ್ರಮಕ್ಕೆ ಮನವಿ



ಧೈರ್ಯದ ದಾರಿ

**ಮಾನ್ವಿ:** ಪಟ್ಟಣದ ಪೊಲೀಸ್ ಠಾಣೆಯಲ್ಲಿ ಭಾರತೀಯ ಜನತಾ ಪಾರ್ಟಿ ಮಾನ್ವಿ ಮಂಡಲ ಯುವ ಮೋರ್ಚಾ ವತಿಯಿಂದ ಗುರುವಾರ ಮಾನ್ವಿ ಪೊಲೀಸ್ ಇನ್ಸಪೆಕ್ಟರ್ ಸೋಮಶೇಖರ ಎಸ್. ಕೆಂಚರೆಡ್ಡಿ ರವರಿಗೆ ಜನತಾ ಪಾರ್ಟಿ ಮಾನ್ವಿ ಮಂಡಲ ಯುವ ಮೋರ್ಚಾ ಅಧ್ಯಕ್ಷರಾದ ರವಿಕುಮಾರ ಅಲ್ದಾಳ್ ಮನವಿ ಸಲ್ಲಿಸಿ ಮಾತನಾಡಿ ಅಸ್ಸಾಂ ರಾಜ್ಯದಲ್ಲಿ ರಾಷ್ಟ್ರೀಯ ಕಾಂಗ್ರೆಸ್ ಪಕ್ಷದ ರಾಷ್ಟ್ರೀಯ ಅಧ್ಯಕ್ಷರಾದ ಮಲ್ಲಿಕಾರ್ಜುನ ಖರ್ಗೆಯವರು ಚುನಾವಣಾ ಪ್ರಚಾರ ಭಾಷಣದಲ್ಲಿ ಪವಿತ್ರ ಧರ್ಮ ಗ್ರಂಥಾವಾದ ಕುರಾನ್ ಅನ್ನು ಉಲ್ಲೇಖಿಸಿ ಆರ್.ಎಸ್.ಎಸ್. ಮತ್ತು ಬಿಜೆಪಿ ಪಕ್ಷವನ್ನು ವಿಷಸರ್ಪಗಳಿಗೆ ಹೊಲಿಸಿ ಅವರನ್ನು ಮುಸಲ್ಮಾನರು ಹತ್ಯಮಾಡದೆ ಇದ್ದಲ್ಲಿ ಬದುಕುವುದಕ್ಕೆ ಆಗುವುದಿಲ್ಲ ಎಂದು ಅಲ್ಪ ಸಂಖ್ಯೆತರನ್ನು ಒಲೈಕೆ ಮಾಡುವ ಬರದಲ್ಲಿ ಪ್ರಚೋದನೆಕಾರಿಯಾಗಿ ಮಾತನಾಡಿದ್ದು ದೇಶದಲ್ಲಿನ ಲಕ್ಷಾಂತರ ಆರ್.ಎಸ್.ಎಸ್. ಮತ್ತು ಬಿಜೆಪಿ ಪಕ್ಷದ ಕಾರ್ಯಕರ್ತರಲ್ಲಿ ಜೀವಭಯ ಮೂಡಿಸಿದೆ ಹಾಗೂ ಧಾರ್ಮಿಕ ಸಮುದಾಯಗಳ ನಡುವಿನ ಸೌಹಾರ್ದತೆಗೆ ದಕ್ಕೆಯುಂಟಾಗಿರುವುದರಿಂದ ಕಾಂಗ್ರೆಸ್ ಪಕ್ಷದ ರಾಷ್ಟ್ರ ಅಧ್ಯಕ್ಷರಾದ ಮಲ್ಲಿಕಾರ್ಜುನ ಖರ್ಗೆಯವರನ್ನು ಕೂಡಲೇ ಬಂಧಿಸಿ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಕಾನೂನು ಪ್ರಕೋಷ್ಟದ ಶರಣಬಸವ. ಮುಖಂಡರಾದ ಜೆ.ಸುಧಕಾರ್, ಗುರುಸಿದ್ದಪ್ಪ ಕಣ್ಣೂರು, ಜೆ.ಜಗದೀಶ್ ನಾಯಕ, ಶಿವಕುಮಾರ.ಕೆ, ದುರುಗಪ್ಪ ತಡಕಲ್, ಜೆ.ಮಂಜುನಾಥ ನಾಯಕ, ಚನ್ನಬಸವ ನಾಯಕ,ರಾಜಶೇಖರ, ಭಾಸ್ಕರ್ ಜಗ್ಲಿ,ಸಿದ್ದಯ್ಯಸ್ವಾಮಿ ಕಳ್ಳಿಮಠ, ಈರಣ್ಣ ನಾಯಕ, ಗುರುರಾಜ ನಾಗಲಾಪುರ್,ಶಿವರಾಜ ನಾಯಕ, ಹನುಮೇಶನಾಯಕ್,ವಿಶ್ವನಾಥ ನಂದಿಹಾಳ್, ಕುಮಾರಸ್ವಾಮಿ ಮೇದಾ,ಬಸವರಾಜ ನಕ್ಕುಂದಿ,ಸೇರಿದಂತೆ ಇನ್ನಿತರರು ಇದ್ದರು.

## ಎಸ್ಸೆಸ್ಸೆಲ್ಸಿ ಗ್ರೇಡ್ ಪ್ರಶ್ನಿಸಿದ್ದ ಅರ್ಜಿದಾರರಿಗೆ ಲಕ್ಷ ರೂ. ದಂಡ



**ಬೆಂಗಳೂರು,ಏ.10–** ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಹಿಂದಿ ಸೇರಿದಂತೆ ತೃತೀಯ ಭಾಷೆಗಳಿಗೆ ಅಂಕಗಳ ಬದಲಿಗೆ ಗ್ರೇಡ್ ನೀಡುವ ಸಂಬಂಧ ಸರ್ಕಾರದ ಪ್ರಸ್ತಾಪಕ್ಕೆ ಸಂಬಂಧಿಸಿದಂತೆ ಪತ್ರಿಕೆಗಳ ವರದಿ ಆಧರಿಸಿ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಲ್ಲಿಸಿದ್ದ ಅರ್ಜಿದಾರರಿಗೆ ಹೈಕೋರ್ಟ್ 1 ಲಕ್ಷ ರೂ. ದಂಡ ವಿಧಿಸಿ ಆದೇಶಿಸಿದೆ.

ನಗರದ ಹೆಚ್.ಎನ್.ಚಂದನಾ ಮತ್ತು ಎಸ್.ವೆಂಕಟೇಶ್ ಅವರು ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ಮುಖ್ಯ ನ್ಯಾಯಮೂರ್ತಿ ವಿಭು ಬಖ್ರು ಮತ್ತು ನ್ಯಾಯಮೂರ್ತಿ ಸಿ.ಎಂ.ಪೂಣಚ್ಚ ಅವರಿದ್ದ ನ್ಯಾಯಪೀಠ ಈ ಆದೇಶ ನೀಡಿದೆ.

ಅಲ್ಲದೆ, ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ತೃತೀಯ ಭಾಷೆಗಳಿಗೆ ಅಂಕಗಳ ಬದಲಿಗೆ ಶ್ರೇಣಿಗಳನ್ನು ನೀಡುವ ವ್ಯವಸ್ಥೆಯ ಕುರಿತ ಶಿಕ್ಷಣ ಸಚಿವರ ಹೇಳಿಕೆಗೆ ಸಂಬಂಧಿಸಿದಂತೆ ಪತ್ರಿಕಾ ವರದಿಗಳನ್ನು ಆಧರಿಸಿ ಅರ್ಜಿ ಸಲ್ಲಿಸಲಿದ್ದಾರೆ. ಅರ್ಜಿದಾರರ ಈ ನಡೆ ಅತ್ಯಂತ ಅಗೌರವಯುತವಾಗಿದೆ. ಇಂತಹ ಪತ್ರಿಕಾ ಹೇಳಿಕೆಗಳನ್ನು ರದ್ದುಗೊಳಿಸುವುದಕ್ಕೆ ಹೈಕೋರ್ಟ್‌ಗೆ ಅಸಾಧಾರಣವಾದ ವಿಶೇಷ ನ್ಯಾಯವ್ಯಾಪ್ತಿ ಚಲಾಯಿಸಬೇಕಾಗುತ್ತದೆ ಎಂದು ಪೀಠ ತಿಳಿಸಿದೆ.

ಜೊತೆಗೆ, ಇದೊಂದು ಪ್ರಚಾರಕ್ಕಾಗಿ ಸಲ್ಲಿಸಿರುವ ಅರ್ಜಿಯಾಗಿದ್ದು, ಅರ್ಜಿದಾರರಿಗೆ 50 ಸಾವಿರ ರೂ. ದಂಡ ವಿಧಿಸಲಾಗುವುದು. ದಂಡದ ಮೊತ್ತವನ್ನುಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರಕ್ಕೆ ಪಾವತಿಸಬೇಕು ಎಂದು ಪೀಠ ತಿಳಿಸಿತು. ಅಲ್ಲದೆ, ಒಂದು ವೇಳೆ ಅರ್ಜಿದಾರರು ದಂಡದ ಮೊತ್ತವನ್ನು ಪಾವತಿ ಮಾಡದಿದ್ದಲ್ಲಿ, ಅವರ ಭೂ ಕಂದಾಯಕ್ಕೆ ಬಾಕಿ ಮೊತ್ತವನ್ನಾಗಿ ಪರಿಗಣಿಸಿ ವಸೂಲಿ ಮಾಡಬಹುದಾಗಿದೆ ಎಂದು ತಿಳಿಸಿತು.

ಇದಾದ ಬಳಿಕವೂ ಅರ್ಜಿದಾರರು ಮತ್ತೆ ವಾದ ಮುಂದುವರೆಸಿ, ಹಿಂದಿ ಭಾಷೆಯನ್ನು ತೆಗೆದುಹಾಕುಲಾಗುತ್ತದೆ ಎಂದು ಪೀಠಕ್ಕೆ ವಿವರಿಸಿದರು.ಇದಕ್ಕೆ ಅಸಮಾಧಾನ ವ್ಯಕ್ತಪಡಿಸಿದ ನ್ಯಾಯಪೀಠ, ಮೂರು ಸಾಲುಗಳ ಪತ್ರಿಕಾ ವರದಿ ಆಧರಿಸಿ ಅರ್ಜಿ ಸಲ್ಲಿಸಿದ್ದಾರೆ. ಆದರೆ, ಹಿಂದಿ ಭಾಷೆಯನ್ನು ತೆಗೆದುಹಾಕಲಾಗಿದೆ ಎಂಬುದಾಗಿ ಪತ್ರಿಕಾ ವರದಿಯಲ್ಲಿ ತಿಳಿಸಿಲ್ಲ.

ಜೊತೆಗೆ, ಸಚಿವರು ಹಿಂದಿ ಭಾಷೆ ತೆಗೆಯಬೇಕು ಎಂದು ಹೇಳಿದ್ದಾರೆ ಎಂದು ಅರ್ಜಿಯಲ್ಲಿ ಹೇಳಲಾಗಿದೆ. ಅದು ತಪ್ಪಾಗಿದ್ದು, ಅದನ್ನು ಅರ್ಜಿಯಲ್ಲಿ ಸೇರಿಸಲಾಗಿದೆ. ಈ ರೀತಿಯ ಅಂಶ ಪತ್ರಿಕೆಗಳ ವರದಿಯಲ್ಲಿ ಉಲ್ಲೇಖವಾಗಿಲ್ಲ. ಆದ್ದರಿಂದ ದಂಡದ ಮೊತ್ತವನ್ನು 1 ಲಕ್ಷ ರೂ.ಗಳಿಗೆ ಹೆಚ್ಚಳ ಮಾಡಲಾಗುತ್ತಿದೆ ಎಂದು ತಿಳಿಸಿ, ಅರ್ಜಿಯನ್ನು ವಜಾಗೊಳಿಸಿತು.

# ಕೇಂದ್ರದ ಯೋಜನೆಗಳನ್ನು ಅರ್ಹ ಫಲಾನುಭವಿಗಳಿಗೆ ತಲುಪಿಸಿ

**ದೇವನಹಳ್ಳಿ.ಬೆಂ.ಗ್ರಾ ಏ.10**–ಕೇಂದ್ರ ಸರಕಾರದ ಜನಪರ ಯೋಜನೆಗಳನ್ನು ಕಾಲಮಿತಿಯೊಳಗೆ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಿ, ಅರ್ಹ ಫಲಾನುಭವಿಗಳಿಗೆ ತ್ವರಿತವಾಗಿ ಸೌಲಭ್ಯಗಳು ತಲುಪುವಂತೆ ಕ್ರಮವಹಿಸಿ ಎಂದು ಅಧಿಕಾರಿಗಳಿಗೆ ಚಿಕ್ಕಬಳ್ಳಾಪುರ ಲೋಕಸಭಾ ಸಂಸದ ಡಾ.ಕೆ ಸುಧಾಕರ್ ಅವರು ಸೂಚನೆ ನೀಡಿದರು.



ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ ಭವನದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಡೆದ ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ ಸಮಿತಿಯ ದಿಶಾ ಸಭೆಯಲ್ಲಿ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲಿಸಿ ಅವರು ಮಾತನಾಡಿದರು.

ಕೇಂದ್ರ ಸರಕಾರವೂ ಆಯುಷ್ಮಾನ ಭಾರತ, ಕಿಸಾನ್ ಸಮ್ಮಾನ್, ವಿಶ್ವಕರ್ಮ, ಪಿಎಂಇಜಿಪಿ ಯೋಜನೆಯಂತಹ ಸಾಕಷ್ಟು ಜನರ ಪರ ಯೋಜನೆಗಳನ್ನು ತಂದಿದ್ದು, ಅದರ ಸೌಲಭ್ಯಗಳು ಫಲಾನುಭವಿಗಳಿಗೆ ತಲುಪುವಂತೆ ಅಧಿಕಾರಿಗಳು ನೋಡಿಕೊಳ್ಳಬೇಕು.

ರೈತರಲ್ಲಿ ಫಸಲ್ ಭೀಮಾ ಯೋಜನೆ ಅರಿವು ಮೂಡಿಸಿ: ಜಿಲ್ಲೆಯಲ್ಲಿ 1.92 ಲಕ್ಷ ರೈತರು ಇದ್ದು, ಪ್ರಧಾನಮಂತ್ರಿ ಫಸಲ್ ಭೀಮಾ ಯೋಜನೆಯಡಿ ಕಳೆದ ವರ್ಷ ಕೇವಲ 6053 ರೈತರು ನೋಂದಾಯಿಸಿಕೊಂಡಿದ್ದಾರೆ. ನೋಂದಾಯಿತ ರೈತರ ಸಂಖ್ಯೆಯಲ್ಲಿ ತೀರಾ ಕಡಿಮೆಯಾಗಿದ್ದು, ಜಿಲ್ಲೆಯ ರೈತರಲ್ಲಿ ಯೋಜನೆ ಕುರಿತಾಗಿ ವ್ಯಾಪಕ ಅರಿವು ಮೂಡಿಸುವ ಕಾರ್ಯಕ್ಕೆ ಸಂಬಂಧಪಟ್ಟ ಇಲಾಖೆ ಅಧಿಕಾರಿಗಳು ಮುಂದಾಗಬೇಕು ಎಂದು ಸೂಚಿಸಿದರು.

ವಿಮೆ ಕಟ್ಟಿರುವವರಿಗೆ ಸಾಕಷ್ಟು ಈಗಾಗಲೇ ಅನುಕೂಲವಾಗಿದೆ. ರೈತರಿಗೆ ನಂಬಿಕೆ ಇಲ್ಲದ ಕಾರಣ ವಿಮೆ ಕಟ್ಟಿಲ್ಲ. ಇದರ ಬಗ್ಗೆ ಅರಿವು ಮೂಡಿಸಬೇಕು. ವಿಶೇಷ ಅಭಿಯಾನದ ಮೂಲಕ ಜನರಿಗೆ ಈ ಯೋಜನೆಯ ಬಗ್ಗೆ ಮಾಹಿತಿ ನೀಡಬೇಕು. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಈಗಾಗಲೇ ಸಾಕಷ್ಟು ಜಮೀನುಗಳನ್ನು ಕೆಐಎಡಿಬಿ ವಶಪಡಿಸಿಕೊಂಡಿದ್ದಾರೆ. ಇದರಿಂದ ಫಲಾನುಭವಿಗಳಿಗೆ ವಿಮೆ ಸೌಲಭ್ಯ ತಲುಪಿದಾಗ ಅದರ ಬಗ್ಗೆ ಕಾರ್ಯಕ್ರಮ ಮಾಡಿ ರೈತರಿಗೆ ಅರಿವು ಮೂಡಿಸಬೇಕು ಎಂದರು.

ರೈಲ್ವೆ ಇಲಾಖೆ ಕೆಲಸಗಳು ಶೀಘ್ರವಾಗಲಿ ದೊಡ್ಡಬಳ್ಳಾಪುರ ರೈಲ್ವೆ ಸ್ಟೇಷನ್ ಬಳಿ ಅಂಡರ್ ಪಾಸ್ ಅವೈಜ್ಞಾನಿಕವಾಗಿದ್ದು, ಇಲ್ಲಿ ಹೆಚ್ಚಿನ ಟ್ರಾಫಿಕ್ ಸಮಸ್ಯೆಯಾಗುತ್ತಿದೆ. ಈ ಭಾಗಕ್ಕೆ ಪ್ರಮುಖವಾಗಿ ಮೇಲ್ಸೇತುವೆ ಅಗತ್ಯವಾಗಿದೆ. ಈಗಾಗಲೇ ಶಾಸಕರು, ಅಧಿಕಾರಿಗಳ ಜತೆಗೆ ನಾನು ಸ್ಥಳಕ್ಕೆ ಭೇಟಿ ನೀಡಿದ್ದೆ. ಇಲ್ಲಿ ಸಾಕಷ್ಟು ಸಮಸ್ಯೆಯಾಗುತ್ತಿದೆ. ನೆಲಮಂಗಲದಲ್ಲಿ ರೈಲ್ವೆಸ್ಟೇಷನ್ನಲ್ಲಿ ಪ್ಲಾಂಟ್ ಫಾರ್ಮ್–2 ರ ನಿರ್ಮಾಣ ಮಾಡಲು ಅಗತ್ಯ ಕ್ರಮವಹಿಸಬೇಕು. ವೇಗವಾಗಿ ರೈಲ್ವೆ ಇಲಾಖೆಯೂ ಕೆಲಸಗಳನ್ನು ಮಾಡಬೇಕು.

ರೈಲ್ವೆ ಇಲಾಖೆಯ ಸಾಕಷ್ಟು ಕೆಲಸಗಳು ನಿಧಾನವಾಗಿ ಸಾಗುತ್ತಿದ್ದು, ಅದಕ್ಕೆ ವೇಗ ನೀಡಬೇಕು ಎಂದರು. ಗರ್ಭಕಂಠ ಕ್ಯಾನ್ಸರ್ ಲಸಿಕಾ ಜಾಗೃತಿ ಹೆಚ್ಚಿಸಿ: ಕೇಂದ್ರ ಸರ್ಕಾರದಿಂದ ಹೆಣ್ಣು ಮಕ್ಕಳಲ್ಲಿ ಕಂಡುಬರುವ ಗರ್ಭಕಂಠ ಕ್ಯಾನ್ಸರ್ ತಡೆಗಟ್ಟುವ ನಿಟ್ಟಿನಲ್ಲಿ ದೇಶದ ಎಲ್ಲಾ ಹೆಣ್ಣುಮಕ್ಕಳಿಗೆ ಉಚಿತವಾಗಿ ಎಚ್.ಪಿ.ವಿ ಲಸಿಕೆ ನೀಡುತ್ತಿದ್ದು, ಜಿಲ್ಲೆಯ ನಾಲ್ಕು ತಾಲೂಕು ಮಟ್ಟದಲ್ಲಿ ಜಾಗೃತಿ ಮೂಡಿಸುವ ಕೆಲಸ ಆಗಬೇಕು.

ಜಿಲ್ಲೆಯಲ್ಲಿ 12,000 ಲಸಿಕೆಗಳ ಗುರಿಯಿದ್ದು, ಎಲ್ಲಾ ತಾಲೂಕುಗಳಲ್ಲಿ ಶಾಸಕರು, ಸಂಸದರು, ಸಚಿವರ ನೇತೃತ್ವದಲ್ಲಿ ಕಾರ್ಯಕ್ರಮಗಳನ್ನು ಮಾಡಿ, ಶಾಲಾ ಮಕ್ಕಳಿಗೂ ಈ ಲಸಿಕೆಯ ಬಗ್ಗೆ ಅರಿವು ಮೂಡಿಸುವ ಕೆಲಸ ಮಾಡಬೇಕು ಎಂದರು.

ಜಿಲ್ಲೆಯಲ್ಲಿ 22 ಬಾಲ್ಯ ವಿವಾಹ ತಡೆ:
ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಕಳೆದ ವರ್ಷದಲ್ಲಿ 22 ಬಾಲ್ಯ ವಿವಾಹಗಳನ್ನು ತಡೆಯಲಾಗಿದೆ. 4 ಪ್ರಕರಣಗಳ ವಿರುದ್ಧ ಎಫ್.ಐ.ಆರ್ ದಾಖಲಿಸಲಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರು ಮಾಹಿತಿ ನೀಡಿದರು.

ಜಿಲ್ಲೆಯ ವಿವಿಧ ಕೈಗಾರಿಕೆಗಳಿಂದ ಸಿ.ಎಸ್.ಆರ್ ಅನುದಾನದಡಿ ಜಿಲ್ಲೆಗೆ ಬಂದ ಅನುದಾನದ ಕುರಿತು ಮಾಹಿತಿಯನ್ನು ಎರಡು ವಾರದಲ್ಲಿ ಒದಗಿಸುವಂತೆ ಕೈಗಾರಿಕಾ ಜಂಟಿ ನಿರ್ದೇಶಕರಿಗೆ ಸಂಸದರು ಸೂಚಿಸಿದರು.


ಜಿಲ್ಲೆಯಲ್ಲಿ ಜಲಜೀವನ ಮಿಷನ್ (ಜೆಜೆಎಂ) ಕಾಮಗಾರಿಗಳಲ್ಲಿ ಕಳಪೆ ಮಟ್ಟದ ವಸ್ತುಗಳನ್ನು ಬಳಕೆ ಆಗಬಾರದು, ಗುಣಮಟ್ಟ ಕಾಯ್ದುಕೊಂಡು ಗ್ರಾಮೀಣ ಜನರಿಗೆ ನೀರು ಕೊಡುವ ಕೆಲಸ ಆಗಬೇಕು ಎಂದ ಸಂಸದರು ಕೋಯಿರಾ ಗ್ರಾಮದಲ್ಲಿ ನೀರಿನ ಸಮಸ್ಯೆ ಎದುರಾಗಿದ್ದು, ತಕ್ಷಣವೇ ಬೋರ್ ವೇಲ್ ಕೊರೆಸಿ ನೀರಿನ ಸಮಸ್ಯೆಗೆ ಪರಿಹಾರ ಒದಗಿಸುವ ಕೆಲಸಕ್ಕೆ ಮುಂದಾಗಿ ಎಂದು ಅಧಿಕಾರಿಗಳಿಗೆ ಹೇಳಿದರು. ಗ್ರಾಮಗಳಲ್ಲಿ ಕುಡಿಯುವ ನೀರಿನ ಮೂಲಗಳಿಗೆ ಎಚ್.ಎನ್ ವ್ಯಾಲಿ ಮತ್ತು ಕೆ.ಸಿ ವ್ಯಾಲಿ ನೀರು ಸೇರುವುದನ್ನು ಪರೀಕ್ಷೆಯನ್ನು ಆಗಾಗ್ಗೆ ಮಾಲಿನ್ಯ ನಿಯಂತ್ರಣ ಮಂಡಳಿಯವರು ಮಾಡಬೇಕು. ಜತೆಗೆ ಗ್ರಾಮೀಣಿಗರಿಗೆ ಶುದ್ಧ ಕುಡಿಯುವ ನೀರಿನ ಕಲ್ಪಿಸುವಂತ ಕೆಲಸ ಆಗಬೇಕು ಎಂದರು.

ಅಧಿಕಾರಿಗಳು ಕೇವಲ ಕಚೇರಿಗೆ ಕೆಲಸ ಕಾರ್ಯಗಳ ಜತೆಗೆ ಗ್ರಾಮ, ನಗರಗಳಿಗೂ ಭೇಟಿ ನೀಡಿ, ಅಲ್ಲಿನ ಜನರ ಕುಂದು ಕೊರತೆಗಳನ್ನು ಆಲಿಸಬೇಕು. ಸರಕಾರಿ ಕಾರ್ಯಕ್ರಮಗಳಲ್ಲಿ ಕಡ್ಡಾಯವಾಗಿ ಶಿಷ್ಟಾಚಾರವನ್ನು ಪಾಲಿಸುವ ಕೆಲಸವನ್ನು ಮಾಡಬೇಕು. ಸಮರ್ಪಕವಾಗಿ ಕೆಲಸ ಮಾಡದ ಅಧಿಕಾರಿಗಳ ವಿರುದ್ಧ ಅಗತ್ಯ ಕ್ರಮ ಕೈಗೊಳ್ಳಲಾಗುತ್ತದೆ ಎಂದರು.

ಜಿಲ್ಲೆಯ ಎಲ್ಲ ಕಚೇರಿಗಳಲ್ಲಿ ವಿಕಲಚೇತನರಿಗೆ ಸುಗಮ ಭಾರತ ಅಭಿಯಾನದಡಿ ಅವಶ್ಯಕ ಸೌಕರ್ಯಗಳನ್ನು ಕಲ್ಪಿಸಬೇಕು. ವಿಕಲಚೇತನ ಸ್ನೇಹಿ ಇಳಿಜಾರು ದಾರಿ, ಸುಲಭ ಶೌಚಾಲಯ, ಲಿಫ್ಟ್ ಗಳಲ್ಲಿ ಬ್ರೈಲ್ ಸಂಕೇತ ಮತ್ತು ಶಬ್ದ ಸಂಕೇತ ಸೇರಿ ವಿಕಲಚೇತನ ಸ್ನೇಹಿ ಪೂರಕ ವಾತಾವರಣ ಕಲ್ಪಿಸಲು ಕ್ರಮ ವಹಿಸಲಾಗುವುದು ಜಿಲ್ಲಾಧಿಕಾರಿ ಡಾ. ಕೆ.ಎನ್ ಅನುರಾಧ ಅವರು ತಿಳಿಸಿದರು.

ಕಾರ್ಯಕ್ರಮದಲ್ಲಿ ದೊಡ್ಡಬಳ್ಳಾಪುರ ಶಾಸಕ ಧೀರಜ್ ಮುನಿರಾಜು, ಅಪರ ಜಿಲ್ಲಾಕಾರಿ ಸೈಯಿದಾ ಆಯಿಷಾ ಜಿಪಂ ಉಪಕಾರ್ಯದರ್ಶಿ ಶಿವಕುಮಾರ್, ಬಾಶೆಟ್ಟಿಹಳ್ಳಿ ಪಪಂ ಅಧ್ಯಕ್ಷ ಪ್ರೇಮ್ ಕುಮಾರ್, ದಿಶಾ ಸಮಿತಿ ಸದಸ್ಯರು, ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು ಹಾಜರಿದ್ದರು.

# ಕೇರಳ ಬಾಲಕಿ ನಾಪತ್ತೆ ಶವವಾಗಿ ಪತ್ತೆ



**ಚಿಕ್ಕಮಗಳೂರು, ಏ.10:** ಚಂದ್ರದ್ರೋಣ ಪರ್ವತ ಶ್ರೇಣಿಯ ಮಾಣಿಕ್ಯಧಾರಾ ಜಲಪಾತದ ಬಳಿ ಕಳೆದ ಮೂರು ದಿನಗಳಿಂದ ನಾಪತ್ತೆಯಾಗಿದ್ದ ಕೇರಳ ಮೂಲದ 14 ವರ್ಷದ ಬಾಲಕಿ ಶ್ರೀನಂದಾ ಅವರ ಮೃತದೇಹ ಇಂದು ಮಧ್ಯಾಹ್ನ ಪತ್ತೆಯಾಗಿದೆ. ಸುಮಾರು 2 ಸಾವಿರ ಅಡಿ ಆಳದ ಪ್ರಪಾತದಲ್ಲಿ ಬಾಲಕಿಯ ಶವ ಸಿಕ್ಕಿರುವುದು ದೃಢಪಟ್ಟಿದೆ. ಕೇರಳದಿಂದ ಕಳೆದ ಏ. 7ರಂದು ಚಿಕ್ಕಮಗಳೂರು ನಗರಕ್ಕೆ ಆಗಮಿಸಿದ್ದ 40 ಜನರ ಪ್ರವಾಸಿ ತಂಡದಲ್ಲಿ ಶ್ರೀನಂದಾ ಕೂಡ ಇದ್ದರು.

ಇನಾಮು ದತ್ತಾತ್ರೇಯ ಪೀಠ ಹಾಗೂ ಮಾಣಿಕ್ಯಧಾರಕ್ಕೆ ಭೇಟಿ ನೀಡಿದ್ದ ಸಂದರ್ಭದಲ್ಲಿ ಬಾಲಕಿ ಹಠಾತ್ತಾಗಿ ನಾಪತ್ತೆಯಾಗಿದ್ದರು. ಈ ಘಟನೆ ನಡೆದ ನಂತರ ಪೊಲೀಸರ ತಂಡ ಬಾಲಕಿಗಾಗಿ ಕಾರ್ಯಚರಣೆಯನ್ನು ನಡೆಸಲಾಗಿತ್ತು.
ಬಾಲಕಿಯ ಪತ್ತೆಗಾಗಿ ಎಸ್‌ಡಿಆರ್‌ಎಫ್, ಅಗ್ನಿಶಾಮಕ ದಳ, ಪೊಲೀಸ್ ಇಲಾಖೆ ಹಾಗೂ ಎಎನ್‌ಎಫ್ ತಂಡಗಳು ಜಂಟಿ ಕಾರ್ಯಾಚರಣೆ ನಡೆಸಿದ್ದವು. ದಟ್ಟ ಅರಣ್ಯ ಮತ್ತು ಕಡಿದಾದ ಪರ್ವತ ಪ್ರದೇಶವಾದ್ದರಿಂದ ಡ್ರೋನ್ ಹಾಗೂ ಥರ್ಮಲ್ ಕ್ಯಾಮೆರಾಗಳನ್ನು ಸಹ ಬಳಸಲಾಗಿತ್ತು.

ಸತತ ಮೂರು ದಿನಗಳ ಕಾಲ ನಡೆಸಿದ ತೀವ್ರ ಶೋಧದ ನಂತರ, ಇಂದು ಮಾಣಿಕ್ಯಧಾರಾದ ಅತ್ಯಂತ ಆಳವಾದ ಪ್ರಪಾತದ ಕೆಳಗೆ ಬಾಲಕಿಯ ಮೃತದೇಹ ಪತ್ತೆಯಾಗಿದೆ. ಬಾಲಕಿ ಆಕಸ್ಮಿಕವಾಗಿ ಕಾಲು ಜಾರಿ ಬಿದ್ದಿದ್ದಾಳೆಯೇ ಅಥವಾ ಬೇರೆನಾದರೂ ಕಾರಣವಿದೆಯೇ ಎಂಬ ಬಗ್ಗೆ ತನಿಖೆ ಮುಂದುವರಿದಿದೆ.
ಕೇರಳದಿಂದ ಆಗಮಿಸಿದ್ದ ಪೋಷಕರು ಮತ್ತು ಕುಟುಂಬಸ್ಥರ ಆಕ್ರಂದನ ಮುಗಿಲು ಮುಟ್ಟಿದೆ. ಸ್ಥಳೀಯ ಪೊಲೀಸರು ಪ್ರಕರಣ ದಾಖಲಿಸಿಕೊಂಡು ಮುಂದಿನ ಕಾನೂನು ಕ್ರಮ ಕೈಗೊಂಡಿದ್ದಾರೆ.

# ಬಂಡಿಹಟ್ಟಿ ಮಹೇಶ್ ಒತ್ತುವರಿ ಮಾಡಿದ್ದ ಸರ್ಕಾರಿ ಜಮೀನು ಒತ್ತುವರಿ ತೆರವು



**ಬಳ್ಳಾರಿ, ಏ.10:** ಸರ್ಕಾರಿ ಜಮೀನು ಒತ್ತುವರಿ ತೆರವು ಕಾರ್ಯಾಚರಣೆ ಮಾಡುವಲ್ಲಿ ಬಳ್ಳಾರಿ ಜಿಲ್ಲಾಡಳಿತ ಯಶಸ್ವಿಯಾಗಿದೆ. ಬಳ್ಳಾರಿ ಹೊರವಲಯದ ಬಂಡಿಹಟ್ಟಿ ಪ್ರದೇಶದ ರೆಡ್ಡಿ ಕಾಂಪೌಂಡ್ ಸರ್ವೇ ನಂಬರ್ 318ರಲ್ಲಿ 3.13 ಎಕರೆ ಸರ್ಕಾರಿ ಭೂಮಿಯನ್ನು ಬಂಡಿಹಟ್ಟಿ ಮಹೇಶ್ ಒತ್ತುವರಿ ಮಾಡಿಕೊಂಡಿದ್ದನ್ನು ಜಿಲ್ಲಾ ಆಡಳಿತ ಇಂದು ತೆರವುಗೊಳಿಸಿದೆ.ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ ಅವರು ಸಿಬ್ಬಂದಿಯೊಂದಿಗೆ ತೆರಳಿ.ಕೋಟ್ಯಾಂತರ ರೂಪಾಯಿ ಮೌಲ್ಯದ ಈ ಭೂಮಿಯನ್ನು ಕಾರ್ಯಾಚರಣೆಯಲ್ಲಿ ತೆರವುಗೊಳಿಸಿ ಸರ್ಕಾರದ ವಶಕ್ಕೆ ಪಡೆದಿದ್ದಾರೆ.ಜಿಲ್ಲಾಧಿಕಾರಿಗಳ ಮಾರ್ಗದರ್ಶನದಂತೆ ಈ ಕಾರ್ಯಾಚರಣೆ ಮಾಡಿದೆ. ನಗರದಲ್ಲಿನ ಸರ್ಕಾರಿ ಜಮೀನು ಒತ್ತುವರಿ ಮಾಡಿರುವುದನ್ನು ಪತ್ತೆಹಚ್ಚಿ ತೆರವುಗಿಳಿಸಲು ಡಿಸಿ, ಎಡಿಸಿ, ಎಸಿ ಮೊದಲಾದವರನ್ನು ಒಳಗೊಂಡ ಸಮಿತಿ ಈ ಬಗ್ಗೆ ಪರಿಶೀಲನೆ ಮಾಡಿ ಈ ಪ್ರಕ್ರಿಯೆ ನಡೆಸಿದೆ.ಇಂತಹ ಅನೇಕ ಪ್ರಕರಣಗಳಿದ್ದು ಇನ್ನು ಮುಂದೆ ಒತ್ತುವರಿ ತೆರವು ಕಾರ್ಯ ಮತ್ತೆ ಮುಂದುವರೆಯಲಿದೆಯಂತೆ.

# ಆರ್.ಜೆ ಕಾಲೇಜಿಗೆ ದ್ವಿತೀಯ ಪಿಯುಸಿ ಉತ್ತಮ ಫಲಿತಾಂಶ

**ಕಲಬುರಗಿ :ಏ.10:**ನಗರದ ಸರದಾರ ವಲ್ಲಭಭಾಯಿ ಪಟೇಲ್ ಶಿಕ್ಷಣ ಸಂಸ್ಥೆಯ ಸಂಚಾಲಿತ ರಮಾಬಾಯಿ ಜಹಾಗೀರದಾರ (ಆರ್.ಜೆ) ಸ್ವತಂತ್ರ ಪದವಿ ಪೂರ್ವ ವಿಜ್ಞಾನ ಕಾಲೇಜು 2025–26ನೇ ಸಾಲಿನ 239 ವಿದ್ಯಾರ್ಥಿಗಳಲ್ಲಿ 107 ವಿದ್ಯಾರ್ಥಿಗಳು ಉನ್ನತಶ್ರೇಣಿ (ಡಿಸ್ಟಿಂಕ್ಷಷನ್), 124 ವಿದ್ಯಾರ್ಥಿಗಳು ಪ್ರಥಮ ಶ್ರೇಣಿ (ಫಸ್ಟ್ ಕ್ಲಾಸ್), 3 ವಿದ್ಯಾರ್ಥಿಗಳು (ದ್ವಿತೀಯ ಶ್ರೇಣಿ) ಪಡೆದಿದ್ದಾರೆ.



24 ವಿದ್ಯಾರ್ಥಿಗಳು 'ಗಣಿತ', ಓರ್ವ ವಿದ್ಯಾರ್ಥಿ 'ರಸಾಯನಶಾಸ್ತ್ರ' ಈರ್ವರು ವಿದ್ಯಾರ್ಥಿಗಳು 'ಜೀವಶಾಸ್ತ್ರ' ವಿಷಯಗಳಲ್ಲಿ 100ಕ್ಕೆ 100 ಅಂಕಗಳನ್ನು ಪಡೆದಿದ್ದಾರೆ. ಬಹಳಷ್ಟು ವಿದ್ಯಾರ್ಥಿಗಳು ಜೀವಶಾಸ್ತ್ರ, ಭೌತಶಾಸ್ತ್ರ, ರಸಾಯನಶಾಸ್ತ್ರ, ಈ ವಿಷಯಗಳಲ್ಲಿ 99 ಅಂಕಗಳನ್ನು ಪಡೆದು ಕಾಲೇಜಿಗೆ ಕೀರ್ತಿ ತಂದಿದ್ದಾರೆ.

ಕಾಲೇಜಿಗೆ ಪ್ರಥಮಸ್ಥಾನ ಪ್ರತೀಕ ರಾಜೇಂದ್ರ 585, ದ್ವಿತೀಯಸ್ಥಾನ ಅಮೂಲ್ಯ ವಿ. ದೇಸಾಯಿ 578, ತೃತೀಯಸ್ಥಾನ ಅಮರ್ ಪಾಟೀಲ್ 576, ವರುಣ ಎಮ್. ಜೋಷಿ 575, ಸಾಯಿತನ್ವಿಕ 572, ಆದಿತಿ ದೇಶಮುಖ 570, ಯೋಗೇಶ ನಾಯಕ್ 568, ಪ್ರಾರ್ಥನಾ ಪಾಂಡುರಂಗ 566, ಅನುಷಾ ಶಂಕರ ಕುಲಕರ್ಣಿ 564, ಸಾಯಿಪ್ರಿಯ ರೆಡ್ಡಿ 564, ಸೌಮ್ಯ ಆರ್. ಕುಲಕರ್ಣಿ 563, ಶೇಖರಿದಾ 562, ರಿತೇಶ ಜಿ. ಕುಲಕರ್ಣಿ 561, ಐಶ್ವರ್ಯ ಜಿ. ಕುಲಕರ್ಣಿ 557, ಸಿದ್ದುಪ್ರಸಾದ ರೆಡ್ಡಿ 557, ಋತುರಾಜ ದೇಶಮುಖ 556, ವರ್ಷಾ ದೇಶಪಾಂಡೆ 556, ಹರ್ಷಿತ್ ವಿನೋದಕುಮಾರ 555, ಮನೋಜ್ಞ ಗುರುರಾಜ 555, ಸಿಂಧು ಶಿವಾನಂದ 555, ಸೌಮ್ಯಾ ರಾಜನಳ್ಳಿ 555, ಅಮೂಲ್ಯ ಪ್ರಕಾಶಚಂದ್ರ 554, ಅನುಪಮಾ ಭಾವಿಕಟ್ಟಿ 554, ಬಸವಪ್ರಭು ನಾಗೇಂದ್ರಪ್ಪಾ 554, ದುರ್ಗಾಂಬಿಕ ಪೂಜಾರಿ 554, ಚೇತನ ನಾಗನಾಥ 553, ಧೂಳಪ್ಪ ಪೂಜಾರಿ 552, ಜಗದೀಶ ದಶರಥ 552, ಶ್ರಾವಣಿ ಪಾಟೀಲ 551, ಶ್ರೀರಕ್ಷಾ ಸುರೇಶ 551, ಅಶ್ವಿನಿ ಅರುಣಕುಮಾರ 551, ಸಂದೇಶ ಸುತಾರ 550, ಸಾನಿಕಾ ರಾಜು 548, ರಸಿಕಲ ಶಾಂತಪ್ಪಾ 547, ತೇಜಶ್ವಿನಿ ಶಿವರಾಜ 546, ಕೀರ್ತಿ ವಿನೋದಕುಮಾರ 544, ಸಮನಾ ಜೋಷಿ 544, ವೇದಾಂತ ಚಂದ್ರಕಾಂತ 544, ಅಂಕಗಳನ್ನು ಪಡೆದಿರುತ್ತಾರೆ.

ಮುಂದುವರೆದು 69 ವಿದ್ಯಾರ್ಥಿಗಳು ಕಅಬ ನಲ್ಲಿ, 59 ವಿದ್ಯಾರ್ಥಿಗಳು ಕಅಃ ನಲ್ಲಿ, 75 ವಿದ್ಯಾರ್ಥಿಗಳು ಕಅಬಃ ನಲ್ಲಿ 90% ಗಿಂತ ಅಧಿಕ ಅಂಕಗಳನ್ನು ಗಳಿಸಿರುತ್ತಾರೆ. ಕಾಲೇಜಿನ ಪ್ರತಿಶತ ಫಲಿತಾಂಶ 97.91% ಆಗಿದ್ದು, ವಿದ್ಯಾರ್ಥಿಗಳ ಸತತ ಪ್ರಯತ್ನ ಮತ್ತು ಸರಣೀ ಪರೀಕ್ಷೆಗಳನ್ನು ನಡೆಸಿರುವುದರಿಂದ ಈ ಸಾಧನೆ ಮಾಡಲು ಸಹಕಾರಿಯಾಯಿತು. ಕಾಲೇಜಿನ ಆಡಳಿತ ಮಂಡಳಿಯ ಸದಸ್ಯರೂ ಆದ ಪ್ರಾಚಾರ್ಯ ಡಾ. ಭುರ್ಲಿ ಪ್ರಹ್ಲಾದ ರವರು ಹಾಗೂ ಸರದಾರ ವಲ್ಲಭಭಾಯಿ ಪಟೇಲ್ ಶಿಕ್ಷಣ ಸಂಸ್ಥೆಯ ಆಡಳಿತ ಮಂಡಳಿ ಮತ್ತು ಕಾಲೇಜಿನ ಉಪಪ್ರಾಚಾರ್ಯರು, ಉಪನ್ಯಾಸಕರು, ಸಿಬ್ಬಂದಿ ಬಳಗ ವಿದ್ಯಾರ್ಥಿಗಳ ಸಾಧನೆಗೆ ಹರ್ಷ ವ್ಯಕ್ತಪಡಿಸಿ ಅಭಿನಂದನೆಗಳನ್ನು ಸಲ್ಲಿಸಿದ್ದಾರೆ.

# ಶಿವಲಿಂಗ ಸ್ಥಳಾಂತರಕ್ಕೆ ಕಿಡಿ: ಸೈದಾಪುರದಲ್ಲಿ ಮಠ ತೆರವು ವಿರುದ್ಧ ಭಕ್ತರ ತೀವ್ರ ಪ್ರತಿಕ್ರಿಯೆ ಮರುನಿರ್ಮಾಣಕ್ಕೆ ಭೀಮಾಶಂಕರ ಸ್ವಾಮೀಜಿ ಒತ್ತಾಯ

**ಸೈದಾಪುರ:ಏ.10:**ಸಮೀಪದ ಬಾಲಯೋಗಿ ರಾಜೇಂದ್ರ ಮಹಾರಾಜರ ಐತಿಹಾಸಿಕ ಹಾಗೂ ಭಕ್ತಿಪೂರ್ಣ ಮಠವನ್ನು ತೆರವುಗೊಳಿಸಿರುವ ಘಟನೆ ವ್ಯಾಪಕ ಚರ್ಚೆಗೆ ಗ್ರಾಸವಾಗಿದ್ದು, ಶಿವಲಿಂಗ ಮೂರ್ತಿಯ ಸ್ಥಳಾಂತರದಿಂದ ಭಕ್ತರ ಆಸ್ಥೆ ಹಾಗೂ ಧಾರ್ಮಿಕ ಭಾವನೆಗಳಿಗೆ ಭಾರೀ ಆಘಾತ ಉಂಟಾಗಿದೆ ಎಂದು ಯಾದಗಿರಿಯ ರಾಜೇಂದ್ರ ಮಠದ ಭೀಮಾಶಂಕರ ಸ್ವಾಮೀಜಿಗಳು ತೀವ್ರ ಅಸಮಾಧಾನ ವ್ಯಕ್ತಪಡಿಸಿದರು.

ನಗರದಲ್ಲಿ ಗುರುವಾರ ಆಯೋಜಿಸಿದ್ದ ಪತ್ರಿಕಾಗೋಷ್ಠಿಯಲ್ಲಿ ಉದ್ದೇಶಿಸಿ ಮಾತನಾಡಿದ ಅವರು, ದಶಕಗಳ ಕಾಲ ಸಾವಿರಾರು ಭಕ್ತರ ಆಧ್ಯಾತ್ಮಿಕ ಕೇಂದ್ರವಾಗಿದ್ದ ಈ ಪವಿತ್ರ ಮಠವನ್ನು ಯಾವುದೇ ಪರ್ಯಾಯ ವ್ಯವಸ್ಥೆ ಮಾಡದೆ, ಏಕಪಕ್ಷೀಯವಾಗಿ ತೆರವುಗೊಳಿಸಿರುವ ಕ್ರಮವನ್ನು ತೀವ್ರವಾಗಿ ಖಂಡಿಸಿದರು.




ಬಾಲಯೋಗಿ ರಾಜೇಂದ್ರ ಮಹಾರಾಜರು 1975–76ರಲ್ಲಿ ಸರ್ವೆ ಸಂಖ್ಯೆ 235, 236 ಮತ್ತು 221ರಲ್ಲಿ ಭೂಮಿ ಖರೀದಿ ಮಾಡಿಕೊಂಡು, ತಮ್ಮ ಸ್ವಂತ ಜಮೀನಿನಲ್ಲೇ ಮಠವನ್ನು ಸ್ಥಾಪಿಸಿ ಆಧ್ಯಾತ್ಮಿಕ ಸೇವೆ ಸಲ್ಲಿಸುತ್ತಿದ್ದರು. ಅಲ್ಲದೆ, ಗೋಶಾಲೆ ನಿರ್ಮಿಸಿ ಅನೇಕ ಗೋವುಗಳಿಗೆ ಆಶ್ರಯ ಕಲ್ಪಿಸಿ, ಸುತ್ತಮುತ್ತಲಿನ ಭಕ್ತರಲ್ಲಿ ಅಪಾರ ಭಕ್ತಿ, ನಂಬಿಕೆ ಹಾಗೂ ಗೌರವ ಗಳಿಸಿದ್ದರು ಎಂದು ವಿವರಿಸಿದರು.
2000ರಲ್ಲಿ ಮಹಾರಾಜರ ನಿಧನದ ನಂತರ ವಾರಸುದಾರರ ಕೊರತೆಯನ್ನು ನೆಪವನ್ನಾಗಿ ಮಾಡಿಕೊಂಡು, 2014ರಲ್ಲಿ ಕಂದಾಯ ಇಲಾಖೆ ಈ ಭೂಮಿಯನ್ನು ಸರ್ಕಾರಿ ಆಸ್ತಿಯಾಗಿ ಪಹಣಿಯಲ್ಲಿ ದಾಖಲಿಸಿಕೊಂಡಿದೆ. ಅದರ ನಂತರ ಇತ್ತೀಚೆಗೆ ಜೆಸಿಬಿ ಯಂತ್ರಗಳ ಮೂಲಕ ಮಠವನ್ನು ಸಂಪೂರ್ಣವಾಗಿ ಧ್ವಂಸಗೊಳಿಸಿರುವುದು ಅತಿ ದುರಂತಕರ ಹಾಗೂ ಖಂಡನೀಯ ಕ್ರಮವಾಗಿದೆ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದರು.
ಈ ಘಟನೆಯ ಪರಿಣಾಮವಾಗಿ ಭಕ್ತರಿಗೆ ಪೂಜೆ ಸಲ್ಲಿಸಲು ಯಾವುದೇ ವ್ಯವಸ್ಥೆಯಿಲ್ಲದೆ ಸಂಕಷ್ಟದ ಪರಿಸ್ಥಿತಿ ನಿರ್ಮಾಣವಾಗಿದ್ದು, ತಕ್ಷಣವೇ ಮಠವನ್ನು ಮರುನಿರ್ಮಿಸಲು ಹಾಗೂ ತೆರವುಗೊಳಿಸಿದ ಶಿವಲಿಂಗವನ್ನು ಸಮರ್ಪಕವಾಗಿ ಮರುಸ್ಥಾಪಿಸಲು ಸಂಬಂಧಿಸಿದ ಅಧಿಕಾರಿಗಳು ತುರ್ತು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.
ಒಂದು ವೇಳೆ ಆಡಳಿತ ಯಂತ್ರ ವಿಳಂಬ ಧೋರಣೆ ಅನುಸರಿಸಿದಲ್ಲಿ, ಭಕ್ತರ ಆಕ್ರೋಶ ಹೋರಾಟದ ರೂಪ ತಾಳುವುದು ಅನಿವಾರ್ಯವಾಗುತ್ತದೆ ಎಂದು ಎಚ್ಚರಿಸಿದರು.

ಈ ಸಂದರ್ಭದಲ್ಲಿ ವೆಂಕಟರಾಮುಲು ಕೂಡ್ಲೂರು, ಆನಂದ್ ಇಬ್ರಾಹಿಂಪೂರ್, ಸುಭಾಷ್ ಯಾದಗಿರಿ ಸೇರಿದಂತೆ ಹಲವು ಭಕ್ತರು ಉಪಸ್ಥಿತರಿದ್ದರು.

# ಕುಡಿಯುವ ನೀರಿನ ಸಮಸ್ಯೆಗಳಾಗದಂತೆ ಮುಂಜಾಗ್ರತೆವಹಿಸಿ: ಸಚಿವ ಈಶ್ವರ ಬಿ. ಖಂಡ್ರೆ

**ಬೀದರ, ಏ.10:** ಬೀದರ ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆಗಳಾಗದಂತೆ ಮುಂಜಾಗ್ರತೆವಹಿಸಬೇಕು. ಬೇಸಿಗೆ ಇರುವುದರಿಂದ ಜಿಲ್ಲೆಯ ಯಾವುದೇ ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆಗಳಿವೆ ಎಂಬ ದೂರುಗಳು ಬರದಂತೆ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಕ್ರಮ ವಹಿಸಬೇಕೆಂದು ಅರಣ್ಯ. ಜೀವಿಶಾಸ್ತ್ರ ಮತ್ತು ಪರಿಸರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ. ಖಂಡ್ರೆ ಹೇಳಿದರು.

ಅವರು ಗುರುವಾರ ಬೀದರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಾನ್ಯ ಮುಖ್ಯಮಂತ್ರಿಗಳು ಏಪ್ರಿಲ್. 11 ರಂದು ಬೀದರ ಜಿಲ್ಲೆಗೆ ಆಗಮಿಸುತ್ತಿರುವ ಹಿನ್ನೆಲೆ ಮತ್ತು ಜಿಲ್ಲೆಯ ಕುಡಿಯುವ ನೀರಿನ ಸಮಸ್ಯೆಗಳ ಕುರಿತು ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ವಿವಿಧ ಇಲಾಖೆಯ ಅಧಿಕಾರಿಗಳಿಗೆ ಕರೆದ ಸಭೆಯಲ್ಲಿ ಅಧ್ಯಕ್ಷತೆವಹಿಸಿ ಮಾತನಾಡಿದರು.

ಮಾನ್ಯ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಏಪ್ರಿಲ್. 11 ರಂದು ಬೀದರಗೆ ಬರುತ್ತಿದ್ದು. ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಬೀದರ ಜಿಲ್ಲಾ ಘಟಕದ ವತಿಯಿಂದ ಹಮ್ಮಿಕೊಂಡಿರುವ 40 ನೇ ರಾಜ್ಯ ಪತ್ರಕರ್ತರ ಸಮ್ಮೇಳನದ ಉದ್ಘಾಟನೆಗೆ ಆಗಮಿಸುತ್ತಿದ್ದು. ಜಿಲ್ಲೆಯ ತುರ್ತಾಗಿರುವ ಸಮಸ್ಯೆಗಳ ಬಗ್ಗೆ ಪ್ರಗತಿ ಪರಿಶೀಲನಾ ಸಭೆ ಮಾಡಲು ತಿಳಿಸಿದ್ದು.



ಬೇಸಿಗೆ ಇರುವುದರಿಂದ ಜಿಲ್ಲೆಯ ಜಾನುವಾರುಗಳಿಗೆ, ತಾಂಡಾ, ಜನವಸತಿ ಪ್ರದೇಶ ಸೇರಿದಂತೆ ಇತರೆ ಯಾವುದೇ ಭಾಗದಲ್ಲಿ ನೀರಿನ ಸಮಸ್ಯೆಗಳಾಗದಂತೆ ನೋಡಿಕೊಳ್ಳಬೇಕು. ನೀರಿನ ಸಮಸ್ಯೆಗಳಿದ್ದರೆ ದಿನದ 24 ಗಂಟೆಗಳಲ್ಲಿ ಸಂಬಂಧಿಸಿದ ಇಲಾಖೆಯವರು ಪರಿಹಾರ ಒದಗಿಸಬೇಕು ಎಂದರು.

ಗ್ರಾಮ ಪಂಚಾಯತಿ ಹಂತದಲ್ಲಿ ಪಿ.ಡಿ.ಓ ಗಳು. ತಾಲ್ಲೂಕು ಹಂತದಲ್ಲಿ ತಾಲ್ಲೂಕು ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ನಗರಸ್ಥಳೀಯ ಸಂಸ್ಥೆಗಳ ಅಧಿಕಾರಿಗಳು ಸೇರಿದಂತೆ ಇತರೆ ವಿವಿಧ ಇಲಾಖೆಯ ಅಧಿಕಾರಿಗಳು ನೀರಿನ ಯಾವುದೇ ಸಮಸ್ಯೆಗಳಿದ್ದರೆ ತಕ್ಷಣ ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಗಮನಕ್ಕೆ ತರಬೇಕು. ಮೇ ಮತ್ತು ಜೂನ್. ಇನ್ನೂ 2 ತಿಂಗಳು ಜಿಲ್ಲೆಯ ಯಾವುದೇ ಭಾಗದಲ್ಲಿ ನೀರಿನ ಸಮಸ್ಯೆಗಳಾಗಬಾರದು. ಕುಡಿಯುವ ನೀರಿನ ಯಾವುದೇ ಬಿಲ್ಲಗಳು ಪೆಂಡಿಂಗ್ ಇದ್ದರೆ ತಕ್ಷಣ ಅವುಗಳನ್ನು ಕ್ಲೀಯರ್ ಮಾಡಬೇಕೆಂದರು.

ಜಿಲ್ಲೆಯ ಆಯಾ ತಾಲ್ಲೂಕಿನ ತಹಶಿಲ್ದಾರರು. ತಾಲ್ಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳು ಟಾಸ್ಕಫೋರ್ಸ ಸಮಿತಿ ಸಭೆ ನಡೆಸಿ ಯಾವ ಗ್ರಾಮಗಳಲ್ಲಿ ನೀರಿನ ಸಮಸ್ಯೆಗಳಿವೆ, ಏನು ಕ್ರಮ ವಹಿಸಬೇಕೆಂಬುದರ ಕುರಿತು ಚರ್ಚಿಸಬೇಕು. ಔರಾದ, ಭಾಲ್ಕಿ, ಹುಮನಾಬಾದ, ಬಸವಕಲ್ಯಾಣ ಸೇರಿದಂತೆ ಎಲ್ಲಾ ತಾಲೂಕಿನ ತಹಶಿಲ್ದಾರರು. ತಾಲ್ಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ಪಿಡಿಓ ಗಳು ಈ ಕುರಿತು ಮುಂಜಾಗ್ರತೆವಹಿಸಬೇಕು. ಬಡಾವಣೆಗೆ ಬಿಡುವ ನೀರು ಪರೀಕ್ಷಿಸಿ. ಓವರ್ ಹೆಡ್ ಟ್ಯಾಂಕಗಳನ್ನು ಸ್ವಚ್ಛಗೊಳಿಸಬೇಕೆಂದು ಹೇಳಿದರು.

ಜಿಲ್ಲೆಯಲ್ಲಿ ಗ್ಯಾಸ್ ಸಮಸ್ಯೆಗಳಿವೆಯೆ ಎಲ್ಲಿಯೂ ಗ್ಯಾಸಗಳನ್ನು ಬ್ಲಾಕಲ್ಲಿ ಮಾರಾಟ ಆಗದಂತೆ ನೋಡಿಕೊಳ್ಳಬೇಕೆಂದು ಸಚಿವರು ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು. ಬೀದರ ನಗರದಲ್ಲಿ ರಾಜ್ಯ ಮಟ್ಟದ ಪರ್ತಕರ್ತರ ದೊಡ್ಡ ಕಾರ್ಯಕ್ರಮ ನಡೆಯುತ್ತಿರುವುದರಿಂದ ನಗರ ಸ್ವಚ್ಛತೆ ಮಾಡುವುದರ ಜೊತೆಗೆ ಎಲ್ಲೂ ಪ್ಲಾಸ್ಟಿಕ್ ಕವರಗಳು ಕಾಣಬಾರದು ಕಾರ್ಯಕ್ರಮಕ್ಕೆ ಬರುವ ಜನರಿಗೆ ಸರಿಯಾಗಿ ಕುಡಿಯುವ ನೀರಿನ ವ್ಯವಸ್ಥೆಯಾಗಬೇಕೆಂದು ಹೇಳಿದರು.

ಈ ಸಭೆಯಲ್ಲಿ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಗಿರೀಶ್ ಬದೋಲೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ್ ಗುಂಟಿ, ಮಹಾನಗರ ಪಾಲಿಕೆ ಆಯುಕ್ತರಾದ ಮುಕುಲ್ ಜೈನ್, ಬೀದರ ಜಿಲ್ಲಾ ಉಪ ಅರಣ್ಯ ಸಂರಕ್ಷಣಾಧಿಕಾರಿ ಆಶಿಷ್ ರೆಡ್ಡಿ, ಅಪರ ಜಿಲ್ಲಾಧಿಕಾರಿ ಶಿವಾನಂದ ಕರಾಳೆ, ಸಹಾಯಕ ಆಯುಕ್ತರು, ಜಿಲ್ಲೆಯ ಎಲ್ಲಾ ತಾಲ್ಲೂಕಿನ ತಹಸೀಲ್ದಾರ, ತಾಲ್ಲೂಕ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳು ಸೇರಿದಂತೆ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಜಿಲ್ಲೆಯಾದ್ಯಂತ ಕುಡಿಯುವ ನೀರಿನ ಸಮಸ್ಯೆ ಇಲ್ಲ :ಜಿಲ್ಲಾಧಿಕಾರಿ ಡಾ. ಆನಂದ ಕೆ.



**ವಿಜಯಪುರ, ಏ. 10:** ಜಿಲ್ಲೆಯಲ್ಲಿ ವಿಪತ್ತು ನಿರ್ವಹಣೆ ಹಾಗೂ ಕುಡಿಯುವ ನೀರಿಗೆ ಅನುದಾನದ ಕೊರತೆಯಿಲ್ಲ. ಅದರಂತೆ,ಜಿಲ್ಲೆಯ ಯಾವುದೇ ಭಾಗದಲ್ಲಿ ಕುಡಿಯುವ ನೀರಿನ ಸಮಸ್ಯೆ ಇಲ್ಲ ಎಂದು ಜಿಲ್ಲಾಧಿಕಾರಿ ಡಾ. ಆನಂದ ಕೆ. ಅವರು ಹೇಳಿದರು.

ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮುಂಬರುವ ಬೇಸಿಗೆಯಲ್ಲಿ ನೀರಿನ ಸಮಸ್ಯೆ ಉಲ್ಬಣಿಸಬಹುದಾದ 11 ತಾಲೂಕುಗಳ 38 ಗ್ರಾಮ ಪಂಚಾಯತಿ ವ್ಯಾಪ್ತಿಯ 65 ಗ್ರಾಮಗಳನ್ನು ಗುರುತಿಸಲಾಗಿದೆ. ಅವುಗಳಲ್ಲಿ ನೀರಿನ ಯಾವುದೇ ಸಮಸ್ಯೆ ಉಂಟಾಗದಂತೆ ಅವಶ್ಯಕ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ ಎಂದರು.

ಆಲಮಟ್ಟಿ ಜಲಾಶಯದಲ್ಲಿ ಕಳೆದ ವರ್ಷ ಇದೇ ದಿನಾಂಕದಂದು 29.712 ಟಿಎಂಸಿ ನೀರಿತ್ತು. ಪ್ರಸ್ತುತ 34.895 ಟಿಎಂಸಿ ಅಂದರೆ ಅಂದಾಜು 5.183 ಟಿಎಂಸಿ ನೀರು ಹೆಚ್ಚಿನ ಪ್ರಮಾಣದಲ್ಲಿ ಲಭ್ಯವಿದೆ ತಿಳಿಸಿದರು.

ನಾರಾಯಣಪುರ ಜಲಾಶಯದಲ್ಲಿ ಕಳೆದ ವರ್ಷ 19.595 ಟಿಎಂಸಿ, ಪ್ರಸ್ತುತ 21.269 ಟಿಎಂಸಿ ಅಂದರೆ ಅಂದಾಜು 1.674 ಟಿಎಂಸಿ ನೀರು ಹೆಚ್ಚಿನ ಪ್ರಮಾಣದಲ್ಲಿ ಲಭ್ಯವಿದೆ ಎಂದು ಹೇಳಿದರು.

ಜಿಲ್ಲೆಯ ಬೇಡಿಕೆಯಂತೆ ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರು, ಇಂಡಿ ತಾಲೂಕಿನ ಜನ–ಜಾನುವಾರುಗಳಿಗೆ ಕುಡಿಯುವ ನೀರಿನ ಸಲುವಾಗಿ ಇಂಡಿ ಶಾಖಾ ಕಾಲುವೆಯಿಂದ 1.00 ಟಿಎಂಸಿ ನೀರನ್ನು ಏ. 11 ರಿಂದ ಏ. 23 ರವರೆಗೆ (12 ದಿನಗಳು) ನಿತ್ಯ ಒಂದು ಸಾವಿರ ಕ್ಯೂಸೆಕ್ ನಂತೆ ಹರಿಸಲು ಆದೇಶಿಸಲಾಗಿದೆ ಎಂದರು.

ಜಿಲ್ಲೆಯಲ್ಲಿ ಸಣ್ಣ ನೀರಾವರಿ ಇಲಾಖೆಯ ವ್ಯಾಪ್ತಿಯಲ್ಲಿ 160 ಕೆರೆಗಳಿದ್ದು, ಅವುಗಳಲ್ಲಿ 66 ಕೆರೆಗಳು ಶೇ. 30 ರಷ್ಟು , 43 ಕೆರೆಗಳು ಶೇ. 31 ರಿಂದ 50 ರವರೆಗೆ ಹಾಗೂ 51 ಕೆರೆಗಳು ಶೇ. 51 ರಿಂದ 99 ರವರೆಗೆ ಭರ್ತಿಯಾಗಿವೆ ಎಂದರು.

ಜಿಲ್ಲೆಯಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯಡಿ 40 ಬಹುಹಳ್ಳಿ ಕುಡಿಯುವ ನೀರಿನ ಯೋಜನೆಗಳಿದ್ದು , ಆಲಮಟ್ಟಿ ಜಲಾಶಯದ ಮೇಲೆ 10, ನಾರಾಯಣಪುರ ಜಲಾಶಯದ ಮೇಲೆ 8, ಭೀಮಾ ನದಿ ಮೂಲಕ 5 ಹಾಗೂ ಕಾಲುವೆ ಮುಖಾಂತರ 17 ಬಹು ಹಳ್ಳಿ ಕುಡಿಯುವ ನೀರಿನ ಯೋಜನೆ (ಎಂವಿಎಸ್) ಗಳು ಅವಲಂಬಿತವಾಗಿರುತ್ತವೆ. ಈ ಯೋಜನೆಗಳಡಿ ಗ್ರಾಮೀಣ ಪ್ರದೇಶದ ವ್ಯಾಪ್ತಿಯಲ್ಲಿ ಗ್ರಾಮಗಳಿಗೆ ಕುಡಿಯುವ ನೀರು ಪೂರೈಸಲಾಗುತ್ತದೆ ಎಂದರು.

ಜಿಲ್ಲೆಯ ನಗರ ಪ್ರದೇಶಗಳಿಗೆ ಸರಬರಾಜು ಮಾಡುತ್ತಿರುವ ನೀರಿನ ಮೂಲಗಳಲ್ಲಿ ಪ್ರಸ್ತುತ ಸಾಕಷ್ಟು ನೀರು ಲಭ್ಯವಿರುತ್ತದೆ. ಹಾಗಾಗಿ ಎಲ್ಲಿಯೂ ನೀರಿನ ಸಮಸ್ಯೆ ಇರುವುದಿಲ್ಲ ಎಂದು ಸ್ಪಷ್ಟಪಡಿಸಿದರು.

ಜಿಲ್ಲಾ ಮಟ್ಟದಲ್ಲಿ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಗಳನ್ನು, ತಾಲ್ಲೂಕು ಮಟ್ಟದಲ್ಲಿ ಕಾರ್ಯ ಪಡೆ (ಟಾಸ್ಕ್ ಫೋರ್ಸ್) ಸಭೆಗಳನ್ನು ಹಾಗೂ ಗ್ರಾಮ ಪಂಚಾಯತಿ ಮಟ್ಟದಲ್ಲಿ ಗ್ರಾಮ ಪಂಚಾಯತಿ ವಿಪತ್ತು ನಿರ್ವಹಣಾ ಸಮಿತಿ ಸಭೆಗಳನ್ನು ಜರುಗಿಸಿ ಕುಡಿಯುವ ನೀರಿನ ಯಾವುದೇ ಸಮಸ್ಯೆಯಾಗದಂತೆ ಮೇಲ್ವಿಚಾರಣೆ ಮಾಡಲಾಗುತ್ತಿದೆ ಎಂದು ವಿವರಿಸಿದರು.

ಸಾರ್ವಜನಿಕರು ಕುಡಿಯುವ ನೀರಿನ ಯಾವುದೇ ಸಮಸ್ಯೆಗಳಿದ್ದಲ್ಲಿ ಜಿಲ್ಲಾ ಮಟ್ಟದಲ್ಲಿ ಸ್ಥಾಪಿತ ಉಚಿತ ಸಹಾಯವಾಣಿ ಸಂಖ್ಯೆ 1077 ಕ್ಕೆ ಮಾಹಿತಿ ನೀಡಬಹುದಾಗಿದೆ ಎಂದು ನುಡಿದರು.

ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ರಿಷಿ ಆನಂದ ಅವರು ಮಾತನಾಡಿ, ಗ್ರಾಮೀಣ ಭಾಗದಲ್ಲಿ ಟ್ಯಾಂಕರ್ ಮೂಲಕ ಕುಡಿಯುವ ನೀರು ಪೂರೈಸಲಾಗುತ್ತಿಲ್ಲ. ಗ್ರಾಮೀಣ ಭಾಗದಲ್ಲಿ ಯಾವುದೇ ನೀರಿನ ಸಮಸ್ಯೆ ಇಲ್ಲ ಎಂದರು.

**ಜನಗಣತಿ:** ಗಣತಿದಾರರು ಮತ್ತು ಮೇಲ್ವಿಚಾರಕರು ಸರಿಯಾದ ರೀತಿಯಲ್ಲಿ ತರಬೇತಿ ಪಡೆದುಕೊಂಡು ಗಣತಿ ಕಾರ್ಯವನ್ನು ಯಶಸ್ವಿಗೊಳಿಸಬೇಕು. ಜೊತೆಗೆ ಸಾರ್ವಜನಿಕರೂ ಜನ ಗಣತಿ ಕಾರ್ಯದ ಯಶಸ್ಸಿಗೆ ಕೈ ಜೋಡಿಸಬೇಕು ಎಂದು ಜಿಲ್ಲಾಧಿಕಾರಿ ಡಾ. ಆನಂದ ಕೆ.ಅವರು ಹೇಳಿದರು.

ಜನಗಣತಿಯು ದೇಶದ ಜನಸಂಖ್ಯೆಯ ಗಣತಿಯ ಜೊತೆಗೆ, ದೇಶದ ಸಾಮಾಜಿಕ, ಆರ್ಥಿಕ ಸ್ಥಿತಿಗಳು ಮತ್ತು ಸಾಂಸ್ಕೃತಿಕ ವೈವಿಧ್ಯತೆಯನ್ನು ದಾಖಲಿಸುವ ವೈಜ್ಞಾನಿಕ ಪ್ರಕ್ರಿಯೆಯಾಗಿದ್ದು, ಹಾಗಾಗಿ ಜನಗಣತಿ–2027ರ ಮೇಲ್ವಿಚಾರಕರ ಮತ್ತು ಗಣತಿದಾರರಿಗೆ ಹಮ್ಮಿಕೊಳ್ಳಲಾದ ತರಬೇತಿಯನ್ನು ಸರಿಯಾಗಿ ಪಡೆದುಕೊಂಡು, ಗಣತಿ ಕಾರ್ಯಕ್ಕೆ ತೆರಳಿದಾಗ ಸಾರ್ವಜನಿಕರಿಗೆ ಸೂಕ್ತ ತಿಳಿವಳಿಕೆ ನೀಡಿ, ಗಣತಿ ಕಾರ್ಯಕ್ಕೆ ಒಳಪಡಿಸುವ ಮೂಲಕ ಜನಗಣತಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕು. ಜಿಲ್ಲೆಯ ಜನತೆ ಜನಗಣತಿಯಿಂದ ಹೊರುಗುಳಿಯಬಾರದು ಎಂದರು.

**ಡಿಜಿಟಲ್‌ಗಣತಿ:**ಇದೇ ಮೊದಲ ಬಾರಿಗೆ ಭಾರತದ ಮೊದಲ ಡಿಜಿಟಲ್ ಜನಗಣತಿ ಕಾರ್ಯಕ್ಕೆ ಈಗಾಗಲೇ ಚಾಲನೆ ಸಿಕ್ಕಿದೆ ಎಂದು ತಿಳಿಸಿದರು.

2 ಹಂತಗಳಲ್ಲಿ ನಡೆಯಲಿರುವ ಗಣತಿ ಕಾರ್ಯವನ್ನು ಸ್ವತಃ ಗಣತಿದಾರರು ವಿಶೇಷ ಕಾಳಜಿ ವಹಿಸುವ ಮೂಲಕ ಯಶಸ್ವಿಗೊಳಿಸಬೇಕು ಎಂದರು.

ಈಗಾಗಲೇ ಸ್ವಯಂ ಗಣತಿ ಕಾರ್ಯ ಆರಂಭವಾಗಿದೆ. ಜನಗಣತಿಯ ಸುರಕ್ಷಿತ ವೆಬ್ ಪೋರ್ಟಲ್: https://se.census.gov.inಗೆ ಮೊಬೈಲ್ ಸಂಖ್ಯೆ ಮತ್ತು ಒಟಿಪಿ ಬಳಸಿ ಲಾಗಿನ್ ಆಗಿ. ಬಳಿಕ ನಿಮ್ಮ ಸ್ಥಳ ಆಯ್ಕೆ ಮಾಡಿ. ನಕ್ಷೆಯಲ್ಲಿ ನಿಮ್ಮ ಮನೆ ಗುರುತಿಸಿ. ಬಳಿಕ ಮನೆಯ ಇಲ್ಲವೇ ಕುಟುಂಬದ ವಿವರ ಭರ್ತಿ ಮಾಡಿ, ನಿಮ್ಮ ಖಇ ಖಜಜಿಜಡಿಜಟಿಛಿಜ ಖಆ ಪಡೆಯಬೇಕು ಎಂದು ಜಿಲ್ಲಾಧಿಕಾರಿಗಳು ಸಾರ್ವಜನಿಕರಿಗೆ ಮನವಿ ಮಾಡಿದರು.

ನಿಮ್ಮ ಖಇ ಖಆ ಅನ್ನು ಸುರಕ್ಷಿತವಾಗಿ ಇಟ್ಟು, ಇಟಿಣಟಜಡಿಚಿಣಂಡಿ ಮನೆಗೆ ಬಂದಾಗ ಅದನ್ನು ಅವರೊಂದಿಗೆ ಹಂಚಿಕೊಳ್ಳಬೇಕು ಎಂದರು.

ಏ. 16 ರಿಂದ ಮೇ 15 ರವರೆಗಿನ ಅವಧಿಯಲ್ಲಿ ಗಣತಿದಾರರು ಮನೆ–ಮನೆಗೆ ಭೇಟಿ ನೀಡಿ ವಿವರಗಳನ್ನು ಪರಿಶೀಲಿಸಬೇಕು ಎಂದರು. ಒಂದು ವೇಳೆ ಸಾರ್ವಜನಿಕರು ಸ್ವಯಂ ಗಣತಿ ಪೂರ್ಣಗೊಳಿಸದಿದ್ದರೆ, ಅಂತವರ ಸ್ವಯಂ ಗಣತಿಯನ್ನು ಗಣತಿದಾರರೇ ಮಾಹಿತಿ ಸಂಗ್ರಹಿಸಿ ಗಣತಿ ಕಾರ್ಯ ಯಶಸ್ವಿಗೊಳಿಸಲಿದ್ದಾರೆ ಎಂದರು.

ಈ ಹಂತದಲ್ಲಿ ಸಾರ್ವಜನಿಕರ ಮಾಹಿತಿಯನ್ನು ಶೇ.100ರಷ್ಟು ಗೌಪ್ಯತೆ ಇದ್ದು, ಸ್ವಯಂ ಗಣತಿಯನ್ನು ಪೂರ್ಣಗೊಳಿಸುವಂತೆ ಗಣತಿದಾರರಿಗೆ ಸೂಚನೆ ನೀಡಲಾಗಿದೆ.

ಆಯಾ ಕುಟುಂಬದ ಮುಖ್ಯಸ್ಥರು ತಮ್ಮ ಕುಟುಂಬದ ಮಾಹಿತಿಯನ್ನು ಯಶಸ್ವಿಯಾಗಿ ಸಲ್ಲಿಸಿದ ನಂತರ, ಅವರಿಗೆ ಒಂದು ವಿಶಿಷ್ಟ ಸ್ವಯಂ–ಗಣತಿ ಐಡಿ (ಖಜಟಜಿ–ಇಟಿಣಟಜಡಿಚಿಣುಂಟಿ ಖಆ) ನೀಡಲಾಗುತ್ತದೆ. ಈ ಐಡಿಯನ್ನು ಎಸ್ ಎಂಎಸ್ ಮತ್ತು ಇಮೇಲ್ ಮೂಲಕ ಕಳುಹಿಸಲಾಗುತ್ತದೆ. ಅದನ್ನು ಮನೆಗೆ ಭೇಟಿ ನೀಡುವ ಗಣತಿದಾರರಿಗೆ (ಇಟಿಣಟಜಡಿಚಿಣಂಡಿ) ಆ ಐಡಿಯನ್ನು ಹಂಚಿಕೊಂಡು ಜನಗಣತಿ ಯಶಸ್ವಿಗೊಳಿಸಬೇಕು ಎಂದರು.

ಒಂದು ವೇಳೆ ಸಾರ್ವಜನಿಕರು ತಮ್ಮ ಸ್ವಯಂ ಗಣತಿ ಪೂರ್ಣಗೊಳಿಸದಿದ್ದರೆ, ಗಣತಿದಾರರೇ ಮಾಹಿತಿ ಸಂಗ್ರಹಿಸಬೇಕು ಎಂದರು.

ಜನಗಣತಿಯನ್ನು ಎರಡು ಹಂತಗಳಲ್ಲಿ ನಡೆಯುತ್ತಿದ್ದು,ಇದು ಸಂಪೂರ್ಣ ಡಿಜಿಟಲ್ ಪ್ರಥಮ ಜನಗಣತಿಯಾಗಿದೆ. ದಿನಾಂಕ: 01–04–2026 ರಿಂದ 15–4–2026ರವರೆಗೆ ಸ್ವಯಂ ಗಣತಿ ಕಾರ್ಯ ಪ್ರಗತಿಯಲ್ಲಿದೆ. ದಿನಾಂಕ:16–04–2026 ರಿಂದ 16–05–2026 ರವರೆಗೆ ಮನೆ ಪಟ್ಟಿ ಕ್ಷೇತ್ರ ಕಾರ್ಯ ನಡೆಇದೆ. ಎರಡನೇ ಹಂತದಲ್ಲಿ ಫೆಬ್ರವರಿ 2027 ರಿಂದ ಜನಸಂಖ್ಯಾ ಗಣತಿ ಕಾರ್ಯ ನಡೆಯಲಿದೆ ಎಂದು ಹೇಳಿದರು .

ಜನಗಣತಿ ಸಲುವಾಗಿ ಬ್ಲಾಕ್ ರಚಿಸಲಾಗುತ್ತಿದ್ದು, 150 ರಿಂದ 200 ಮನೆಗಳು ಅಥವಾ 700 ರಿಂದ 800 ಜನಸಂಖ್ಯೆಗನುಗುಣವಾಗಿ ಓರ್ವ ಗಣತಿದಾರರನ್ನು ಪ್ರತಿ 6 ಜನ ಗಣತಿದಾರರಿಗೆ ಓರ್ವ ಮೇಲ್ವಿಚಾರಕರನ್ನು ನೇಮಿಸಲಾಗುವುದು. ಜಿಲ್ಲೆಯಲ್ಲಿ ಗ್ರಾಮೀಣ ಭಾಗದಲ್ಲಿ 2846, ನಗರ ಮತ್ತು ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ 624 ಹಾಗೂ ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ 565 ಬ್ಲಾಕ್ ಸೇರಿದಂತೆ ಒಟ್ಟಾರೆ ಜಿಲ್ಲೆಯಲ್ಲಿ 4,035 ಬ್ಲಾಕ್ ಗಳ ರಚನೆ ಮಾಡಲಾಗಿದೆ. ಜಿಲ್ಲೆಯಲ್ಲಿ ಒಟ್ಟು 4405 ಗಣತಿದಾರರನ್ನು ಹಾಗೂ 767 ಮೇಲ್ವಿಚಾರಕರನ್ನು ನೇಮಿಸಲಾಗಿದೆ ಎಂದು ಹೇಳಿದರು.

ಜನಗಣತಿ ಅಧಿಕಾರಿಯು ಮನೆಗೆ ಭೇಟಿ ನೀಡಿದ ಸಂದರ್ಭದಲ್ಲಿ ಗಣತಿದಾರರು ಕೇಳುವ ಪ್ರಶ್ನೆಗಳಿಗೆ ಸರಿಯಾದ ಮಾಹಿತಿ ನೀಡುವ ಮೂಲಕ ಸಹಕರಿಸುವಂತೆಯೂ ಹಾಗೂ ಜಿಲ್ಲೆಯಲ್ಲಿ ಭಾರತ ಜನಗಣತಿ 2027 ಯಶಸ್ವಿಗೊಳಿಸುವಂತೆ ಮನವಿ ಮಾಡಿದರು.

# ಸಾಂಸ್ಕೃತಿಕ ಪರಂಪರೆ ಉಳಿಸಲು ನಾಟಕಗಳು ಅವಶ್ಯ!ಲಾಭ ನಷ್ಟ ಮರೆತು ಕಲೆಗಾಗಿ ಮಿಡಿಯಿರಿ : ರಾಜಶೇಖರ್ ನೀಲಂಗಿ



**ಸೇಡಂ,ಏ,10:** ಭಾರತದ ಭವ್ಯ ಕಲೆ, ಸಂಸ್ಕೃತಿ ಮತ್ತು ಪರಂಪರೆಯನ್ನು ಮುಂದಿನ ಪೀಳಿಗೆಗೆ ರಂಗಭೂಮಿ ಪರಿಚಯ ಅವಶ್ಯವಾಗಿದ್ದು, ಲಾಭ–ನಷ್ಟದ ಲೆಕ್ಕಾಚಾರವನ್ನು ಬದಿಗಿಟ್ಟು, ಕಲಾವಿದರು ನಿರಂತರವಾಗಿ ಕಲಾ ಸೇವೆಯಲ್ಲಿ ತೊಡಗಿಸಿಕೊಳ್ಳುವುದು ಇಂದಿನ ತುರ್ತು ಅಗತ್ಯವಾಗಿದೆ ಎಂದು ವೀರಶೈವ ಲಿಂಗಾಯತ ಮಹಾಸಭಾದ ತಾಲೂಕಾ ಅಧ್ಯಕ್ಷರಾದ ರಾಜಶೇಖರ ನೀಲಂಗಿ ಹೇಳಿದರು.

ತಾಲೂಕಿನ ಮಳಖೇಡ ಗ್ರಾಮದಲ್ಲಿರುವ ಶ್ರೀ ಷ ಬ್ರ ಚನ್ನವೀರೇಶ್ವರರ 27ನೇ ಜಾತ್ರಾ ಮಹೋತ್ಸವದ ಪ್ರಯುಕ್ತ ಶ್ರೀ ಚನ್ನವೀರೇಶ್ವರ ನವ ತರುಣ ನಾಟ್ಯ ಸಂಘದ ವತಿಯಿಂದ ಮೂರು ದಿನಗಳ ಕಾಲ ಹಮ್ಮಿಕೊಳ್ಳಲಾಗಿರುವ ಎಡೆ ಎತ್ತಿದ ಸರ್ಪಕ್ಕೆ ಗುರಿಯಿಟ್ಟ ಗರುಡ ಸಾಮಾಜಿಕ ನಾಟಕದ ಮೂರನೇ ಪ್ರಯೋಗಕ್ಕೆ ಜ್ಯೋತಿ ಬೆಳಗಿಸಿ ಮಾತನಾಡಿದ ಅವರು ಇಂದಿನ ಡಿಜಿಟಲ್ ಯುಗದಲ್ಲಿ ನಮ್ಮ ಮೂಲ ಪರಂಪರೆಯನ್ನು ಪ್ರತಿಬಿಂಬಿಸುವ ನಾಟಕ ಕಲೆಗೆ ಜೀವ ತುಂಬುವುದು ಕೇವಲ ಕಲಾವಿದರಷ್ಟೇ ಅಲ್ಲದೆ, ಪ್ರೇಕ್ಷಕರಾದ ನಮ್ಮೆಲ್ಲರ ಜವಾಬ್ದಾರಿಯೂ ಆಗಿದೆ ಎಂದರು. ಚಿಂಚೋಳಿ ಡಿವೈಎಸ್ಪಿ ಸಂಗಮನಾಥ ಹಿರೇಮಠ, ರಂಗಕರ್ಮಿ ಹಿರಿಯ ಕಲಾವಿದರಾದ ಸೋಮಶೇಖರ್ ಪಾಟೀಲ್ ಮಲಕೂಡ ಮಾತನಾಡಿದರು. 2025/2026ನೇ ಸಾಲಿನ ಮುಖ್ಯಮಂತ್ರಿ ಪದಕ ಪಡೆದಿರುವ ತಾಲೂಕಿನ ಸೇಡಂ ಪೊ?ಲಿಸ್ ಠಾಣೆಯ ಸಿಪಿಐ ಮಾಹದೇವ ದಿಡ್ಡಿಮನಿ ರವರಿಗೆ ನಾಟಕ ಸಂಘದ ಮಾಲೀಕರು ವಿಶೇಷವಾಗಿ ಸನ್ಮಾನಿಸಿ ಗೌರವಿಸಿದರು. ಮೂರು ದಿನಗಳ ನಾಟಕ ಪ್ರಯೋಗದಲ್ಲಿ ಬಂದೋಬಸ್ತು ವ್ಯವಸ್ಥೆ ಅಚ್ಚುಕಟ್ಟಾಗಿ ನಿರ್ವಹಿಸಿರುವ ಮಳಖೇಡ ಪೊಲೀಸ್ ಠಾಣೆಯ ಸಿಬ್ಬಂದಿ ಸಂಜಯಕುಮಾರ ಬಿರಾದರ ಸೇಡಂ ಠಾಣೆಯ ಸಿಬ್ಬಂದಿಗೆ ವಿಶೇಷವಾಗಿ ನಾಟಕ ಸಂಘದ ಮಾಲೀಕರು ಸನ್ಮಾನಿಸಿ ಗೌರವಿಸಲಾಯಿತು.ಈ ವೇಳೆಯಲ್ಲಿ ಸುಲೇಪೆಟ್ ಸಿಪಿಐ ಕೃಷ್ಣಕುಮಾರ್ ಪಾಟೀಲ್,ಗುರುಗೌಡ ಪಾಟೀಲ್ ತೇಲ್ಲೂರ್,ಪತ್ರಕರ್ತರ ರಂಗಕರ್ಮಿ ಸಿದ್ದಲಿಂಗಯ್ಯ ಸ್ವಾಮಿ ಕೊಡಗಿಮಠ ಮಲಕೂಡ,ನಾಟಕ ಸಂಘದ ಮಾಲೀಕರಾದ ರಾಜಶೇಖರ್ ಪುರಾಣಿಕ್,ಶರಣು ಅವಂಟಿ, ದೇವೇಂದ್ರಪ್ಪ ಹಳಿಜೋಳ,ಸಂತೋಷ್ ಸಂಗಾವಿ,ಚಂದ್ರಶೇಖರ್ ಮರಗೋಳ,ನಾಗರಾಜ ನಂದೂರ್,ಶ್ರೀಕಾಂತ್ ಎಮ್ ಗುಡಿ, ಮಾರುತಿ ಹೊಕ್ಕಳ, ದಿನೇಶ್ ಪಾಟೀಲ್ ಸಣ್ಣೂರು,ಮತ್ತು ಮಾರುತಿ ಐನಾಪುರ್,ಚನ್ನವೀರ ಸೂಲಹಳ್ಳಿ, ರಾಜಶೇಖರ್ ಕೊತ್ತಂಬರಿ, ಚಿತ್ತಾಪುರ್ ಪುರಸಭೆಯ ಮಾಜಿ ಅಧ್ಯಕ್ಷ ಮಲ್ಲಿಕಾರ್ಜುನ ಕಾಳಗಿ, ದೇವಿಂದ್ರಪ್ಪ ಗೌಡ ಬಿಜನಳ್ಳಿ,ಪತ್ರಕರ್ತ ಸುರೇಶ್ ಬಿಜನಳ್ಳಿ,ಸ್ಟೇಜ್ ಡೆಕೋರೇಟರ್ ಮಂಜುನಾಥ್ ಪಾಟೀಲ್ ಬಿಜನಳ್ಳಿ, ಸಂದೀಪ್ ಸಂಗಾವಿ ಶ್ರೀಶೈಲ್ ಮಳಗೊಳ ಅಭಿಶೇಕ ಬಜಾರ ಸೇರಿದಂತೆ ಹಲವರು ಉಪಸ್ಥಿತರಿದ್ದರು.ಸ್ವಾಗತ ನಿರೂಪಣೆ ಗುರುರಾಜ ತಳಕಿನ ಮಾಡಿದರು.

ಸಿನಿಮಾ ಟಿವಿ ಯುಟ್ಯೂಬ್ ಫೇಸ್ಬುಕ್ ಇನ್ಸಾಗ್ರಾಂ ಸೇರಿದಂತೆ ವಿವಿಧ ಸಾಮಾಜಿಕ ಜಾಲತಾಣಗಳು ಬಂದ ನಂತರ ನಾಟಕಗಳು ಬಹಳ ಸಂಕಷ್ಟ ಅನುಭವಿಸುತ್ತದೆ, ಆದರೂ ಗ್ರಾಮೀಣ ಪ್ರದೇಶದಲ್ಲಿ ನಾಟಕಕಾರರು ನಾಟಕ ಸಂಘದ ಮಾಲೀಕರು ರಂಗಭೂಮಿಯ ಕಲೆ ಸಂಸ್ಕೃತಿ ಮುಂದುವರಿಸಿಕೊಂಡು ಹೋಗುತ್ತಿರುವುದು ಸಂತಸ ತಂದಿದೆ.

ಸಂಗಮನಾಥ ಎಸ್ ಹಿರೇಮಠ ಡಿವೈಎಸ್ಪಿ ಚಿಂಚೋಳಿ
ರಂಗಭೂಮಿ ಕೇವಲ ಒಂದು ಕಲೆಯಲ್ಲ, ಅದು ಸಮಾಜದ ದೋಷಗಳನ್ನು ತಿದ್ದುವ ಒಂದು ಅಸ್ತ್ರ. ಈ ಅಸ್ತ್ರದ ಹರಿವು ಯಾವತ್ತೂ ಮಂಕಾಗಬಾರದು.
ಸೋಮಶೇಖರ್ ಪಾಟೀಲ್ ರಂಗಕರ್ಮಿ ಕಲಾವಿದರು ಮಲಕೂಡ

# ಉಚಿತ ಆರೋಗ್ಯ ತಪಾಸಣೆ




**ಬೀದರ :ಏ.10:** ಗೌರವಾನ್ವಿತ ಹೈದ್ರಾಬಾದ ಕರ್ನಾಟಕ ಶಿಕ್ಷಣ ಸಂಸ್ಥೆಯ ಸದಸ್ಯರು ಹಾಗೂ ಬಿ.ವಿ.ಬಿ. ಶಾಲಾ ಕಾಲೇಜು ಆವರಣದ ಸಂಚಾಲಕರಾದ ಡಾ. ರಜನೀಶ್ ಎಸ್. ವಾಲಿಯವರ ಮಾರ್ಗದರ್ಶನದಲ್ಲಿ ಹಾಗೂ ಬಿ.ವಿ. ಭೂಮರಡ್ಡಿ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ. ದೀಪಾ ರಾಗ ನೇತೃತ್ವದಲ್ಲಿ ಹಾಗೂ ಮುಖ್ಯ ಅತಿಥಿಯಾಗಿ ಆಗಮಿಸಿದ ರೋಟರಿ ಕ್ಲಬ್ ಸಿಲ್ವರ್ ಸ್ಟಾರನ ಅಧ್ಯಕ್ಷರಾದ ಶ್ರೀ ಆದೀಶ್ ಆರ್. ವಾಲಿಯವರು ಆಗಮಿಸಿ ಜೊತೆಗೆ ರೋಟರಿ ಕ್ಲಬ್ ಸಿಲ್ವರ್ ಸ್ಟಾನ ಉಪಾಧ್ಯಕ್ಷರಾದ ಶ್ರೀ ಆನಂದ ಕೊಟ್ಟರಕಿ ಹಾಗೂ ಕಾರ್ಯದರ್ಶಿಗಳಾದ ಶ್ರೀ ಕಿರಣ ಸಾಮುವೇಲ್ ವೈದ್ಯರಾದ ಶ್ರೀ ಮನೀಶ ಸಿಂಧೋಲ, ಸಹನಾ ಪಾಟೀಲ ಅವರ ನೇತೃತ್ವದಲ್ಲಿ ಬೀದರ ಜಿಲ್ಲೆಯ ಜನತೆಗೆ ಗುದಗೆ ಆಸ್ಪತ್ರೆಯ ವತಿಯಿಂದ ಜಿಲ್ಲೆಯ ಜನರ ಆರೋಗ್ಯದ ಬಗ್ಗೆ ಬಹಳ ಕಾಳಜಿ ಹೊಂದಿ ಅವರು ಸುತ್ತಮುತ್ತಲಿನ ಹತ್ತು ಹನ್ನೆರಡು ಗ್ರಾಮಗಳಿಗೆ ಭೇಟಿಕೊಟ್ಟು ಉದಾಹರಣೆಗೆ ಚಿಟ್ಟಾ ಗ್ರಾಮದ ಜನತೆಗೆ ಹದಿಹರಿಯದ ವಯಸ್ಕರ ಆರೋಗ್ಯದ ಸಮಸ್ಯೆ ಹಾಗೂ ವಯೋವೃದ್ಧರ ಆರೋಗ್ಯದ ಕಾಳಜಿ ಬಗ್ಗೆ ಆಸಕ್ತಿಹೊಂದಿ ಬೀದರ ಜಿಲ್ಲೆಯ ಪ್ರಸಿದ್ಧ ವೈದ್ಯರಾದ ಡಾ. ಸಚೀನ ಸಿ. ಗುದಗೆ, ಡಾ. ನಿತೀನ್ ಸಿ. ಗುದಗೆ, ಡಾ. ವೈಭವ ಭಧಭದೆ, ಡಾ. ಶೈಲೇಶ ಮಠ, ಡಾ. ಗೋವಿಂದ ಬಚ್ಚಾ, ಡಾ. ಸಂಗಮೇಶ ವಡಗಾಂವೆ ಇಂತಹ ನುರಿತ ವೈದ್ಯರನ್ನು ಮಹಾವಿದ್ಯಾಲಯಕ್ಕೆ ಕರೆಸಿ ಜನರ ಹಲವಾರು ಆರೋಗ್ಯದ ಸಮಸ್ಯೆಗಳಿಗೆ ಉಚಿತ ತಪಾಸಣೆ ಮಾಡಿ ಔಷಧಿ ಹಾಗೂ ಕಣ್ಣಿನ ಪರೀಕ್ಷೆಯನ್ನು ಸಹ ಮಾಡಿ ಜನರ ಮನಸ್ಸಿನಲ್ಲಿ ಇವರ ಸೇವೆ ಶ್ಲಾಘನೀಯವಾಗುವಂತೆ ಮಾಡಿದರು.ಈ ಕಾರ್ಯಕ್ರಮದಲ್ಲಿ ಸುಮಾರು 500 ರೋಗಿಗಳು ಪಾಲ್ಗೊಂಡು ಆರೋಗ್ಯದ ಸಮಸ್ಯೆಗಳಿಗೆ ಪರಿಹಾರ ಕಂಡುಕೊಂಡರು.ಈ ಕಾರ್ಯಕ್ರಮದ ಸ್ವಾಗತವನ್ನು ಹಿಂದಿ ವಿಭಾಗದ ಮುಖ್ಯಸ್ಥರಾದ ಶ್ರೀ ಮಾರುತಿ ಭೀಮಣ್ಣಾ ಮಾಡಿದರೆ, ಸಂಚಾಲನೆಯನ್ನು ಇತಿಹಾಸ ವಿಭಾಗದ ಮುಖ್ಯಸ್ಥರಾದ ಡಾ. ಶಿವಲೀಲಾ ವೀರಯ್ಯಾ ಮಾಡಿದರೆ, ಗಣಿತ ವಿಭಾಗದ ಮುಖ್ಯಸ್ಥರಾದ ಡಾ. ಸಾಮ್ರಟ ಶಿವಪ್ಪ ಪಾಯದ್ ವಂದಿಸಿದರು. ಈ ಕಾರ್ಯಕ್ರಮದಲ್ಲಿ ಎನ್.ಎಸ್.ಎಸ್. 'ಅ' ಘಟಕದ ಅಧಿಕಾರಿಗಳಾದ ಡಾ. ಲಕ್ಷ್ಮೀ ವಿಶ್ವನಾಥ ಹಾಗೂ 'ಬ' ಘಟಕದ ಅಧಿಕಾರಿಯಾದ ಶ್ರೀ ಬಸವರಾಜ ಎಸ್. ಬಿರಾದಾರ ಉಪಸ್ಥಿತರಿದ್ದರು

ಈ ಕಾರ್ಯಕ್ರಮದಲ್ಲಿ ಬಿ.ಎಡ್. ಕಾಲೇಜಿನ ವಿದ್ಯಾರ್ಥಿಗಳು, ಎನ್.ಸಿ.ಸಿ. ವಿದ್ಯಾರ್ಥಿಗಳು ಹಾಗೂ ಮಹಾವಿದ್ಯಾಲಯ ಬೋಧಕ, ಬೋಧಕೇತರರ ಸಿಬ್ಬಂದಿಗಳು ಹಾಜರಿದ್ದರು

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE